EMAIL : dairyadadaari@gmail.com ಸಂಪುಟ: 01 ಸಂಚಿಕೆ: 112
ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಬುಧವಾರ: 08-04-2026

# ರಾಜ್ಯದ ನಾಲ್ಕು ಜಿಲ್ಲೆಗಳಲ್ಲಿ ಲೋಕಾಯುಕ್ತ ದಾಳಿ

## ಬಳ್ಳಾರಿ, ಮೈಸೂರು, ಶಿವಮೊಗ್ಗ, ಚಿತ್ರದುರ್ಗದಲ್ಲಿ ಅಧಿಕಾರಿಗಳ ಮನೆ-ಕಚೇರಿ ಶೋಧ; ದಾಖಲೆ, ಚಿನ್ನಾಭರಣ ಪತ್ತೆ

**ಬೆಂಗಳೂರು,ಏ.7**–ಬೇಸಿಗೆಯ ಬಿಸಿಯ ನಡುವೆ ಇಂದು ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳು ರಾಜ್ಯದ 4 ಕಡೆ ಇಂದು ಬೆಳಂಬೆಳಿಗ್ಗೆ ದಾಳಿ ನಡೆಸಿ ಅಕ್ರಮ ಸಂಪತ್ತು ಬಯಲಿಗೆಳೆದಿದ್ದಾರೆ. ಬಳ್ಳಾರಿ, ಚಿತ್ರದುರ್ಗ, ಮೈಸೂರು ಹಾಗೂ ಶಿವಮೊಗ್ಗದಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದು, ದಾಖಲೆ ಪರಿಶೀಲನೆ ನಡೆಸುತ್ತಿದ್ದಾರೆ.

ಬಳ್ಳಾರಿಯಲ್ಲಿ ಮೀನುಗಾರಿಕಾ ಇಲಾಖೆ ಸಹಾಯಕ ನಿರ್ದೇಶಕ ಶಿವಣ್ಣ ಮನೆ ಮತ್ತು ಕಚೇರಿ ಮೇಲೆ ಲೋಕಾಯುಕ್ತ ದಾಳಿ ನಡೆದಿದ್ದು ಬಳ್ಳಾರಿಯ ಕಚೇರಿ, ಸಿದ್ಧಾರ್ಥ್ ನಗರದ ಮನೆ ಸೇರಿದಂತೆ ಒಟ್ಟು ನಾಲ್ಕು ಕಡೆ ದಾಳಿ ನಡೆಸಲಾಗಿದೆ. ಆದಾಯಕ್ಕಿಂತ ಹೆಚ್ಚು ಆಸ್ತಿಗಳಿಕೆ ಆರೋಪದ ಹಿನ್ನೆಲೆ ದಾಳಿ ನಡೆಸಲಾಗಿದೆ. ಸರ್ಕಾರಿ ಬೊಲೆರೋ ಕಾರನ್ನೂ ಬಿಡದೇ ಪರಿಶೀಲನೆ ನಡೆಸಲಾಗುತ್ತಿದೆ.

ಅಲ್ಲಿ ಸಿಕ್ಕ ಕೆಲವು ದಾಖಲೆಗಳನ್ನ ಹೆಕ್ಕಿ ತೆಗೆದು ಪರಿಶೀಲನೆಗೆ ಕೊಂಡೊಯ್ದಿದ್ದಾರೆ. ಎರಡು ತಂಡಗಳಾಗಿ ಲೋಕಾಯುಕ್ತ ಅಧಿಕಾರಿಗಳು ಕಾರ್ಯಾಚರಣೆ ಕೈಗೊಂಡಿದ್ದಾರೆ.ಇನ್ನು ಮೈಸೂರಿನಲ್ಲಿ ಲೋಕೋಪಯೋಗಿ ಇಲಾಖೆ ಎಇಇ ರೇವಣ್ಣ ಮನೆ ಹಾಗೂ ಕಚೇರಿಯಲ್ಲಿ ದಾಳಿ ನಡೆದಿದೆ. ಮೈಸೂರಿನ ಕಚೇರಿ ಹಾಗೂ ಮಂಡ್ಯದ ಎರಡು ನಿವಾಸದಲ್ಲಿ ದಾಳಿ ನಡೆಸಲಾಗಿದೆ. ಲೋಕಾಯುಕ್ತ ಎಸ್‌ಪಿ ಟಿಜೆ ಉದೇಶ್ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ನಡೆಸಲಾಗುತ್ತಿದೆ.




### ಪ್ರಮುಖಾಂಶಗಳು:

*ರಾಜ್ಯದ 4 ಜಿಲ್ಲೆಗಳಲ್ಲಿ ಲೋಕಾಯುಕ್ತ ದಾಳಿ
*ಬಳ್ಳಾರಿ, ಮೈಸೂರು, ಶಿವಮೊಗ್ಗ, ಚಿತ್ರದುರ್ಗದಲ್ಲಿ ಕಾರ್ಯಾಚರಣೆ
*ಅಧಿಕಾರಿಗಳ ಮನೆ, ಕಚೇರಿ ಮೇಲೆ ಶೋಧ
*ಆದಾಯಕ್ಕಿಂತ ಹೆಚ್ಚು ಆಸ್ತಿ ಆರೋಪ ಹಿನ್ನೆಲೆ ದಾಳಿ
*ಹಲವು ದಾಖಲೆಗಳು ವಶಪಡಿಕೆ
*ಚಿನ್ನಾಭರಣ ಪತ್ತೆ, ಮೌಲ್ಯ ಪರಿಶೀಲನೆ ಮುಂದುವರಿಕೆ
*ಹಲವು ತಂಡಗಳಿಂದ ಏಕಕಾಲದ ದಾಳಿ
*ತೋಟ, ಶಾಲೆ, ನಿವಾಸಗಳಲ್ಲೂ ಶೋಧ
*ನಿವೃತ್ತ ಅಧಿಕಾರಿಯ ಮನೆ ಮೇಲೂ ದಾಳಿ
*ತನಿಖೆ ಮುಂದುವರಿಸುತ್ತಿರುವ ಲೋಕಾಯುಕ್ತ ಅಧಿಕಾರಿಗಳು

ಶಿವಮೊಗ್ಗದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಶೋಭಾ.ಕೆ.ಆರ್ ಮನೆ ಮೇಲೂ ಲೋಕಾಯುಕ್ತ ದಾಳಿ ನಡೆಸಿದೆ. ಶಿವಮೊಗ್ಗ, ಶಿಕಾರಿಪುರ ಹಾಗೂ ಸಾಗರದಲ್ಲಿ ದಾಳಿ ಮಾಡಲಾಗಿದೆ.

ಶಿಕಾರಿಪುರ ಪಟ್ಟಣದ ಚೆನ್ನಕೇಶವ ನಗರದಲ್ಲಿನ ಶೋಭಾ ಮನೆ,ತಾಲೂಕಿನ ತರಲಘಟ್ಟ ಬಳಿಯ 4 ಎಕರೆ ತೋಟ ಹಾಗೂ ಫಾರ್ಮ್ ಹೌಸ್ ಮೇಲೆ ದಾಳಿ ಮಾಡಲಾಗಿದೆ. ಶೋಭಾ ಅವರ ಒಡೆತನದ ಸಾಗರ ತಾಲೂಕಿನ ಅಚಾಪುರ ಬಳಿಯ ಶಾಲೆ ಮೇಲೂ ದಾಳಿ ಮಾಡಲಾಗಿದೆ. ಶಿವಮೊಗ್ಗದ ನಗರದ ನವಿಲೆ ಬಳಿಯ ಮನೆಯಲ್ಲೂ ದಾಖಲೆ ಪರಿಶೀಲನೆ ಕಾರ್ಯ ನಡೆಯುತ್ತಿದೆ. ಶಿವಮೊಗ್ಗ ನಗರದ ಕೆಇಬಿ ಸರ್ಕಲ್ ಬಳಿಯ ಬಿಸಿಎಂ ಜಿಲ್ಲಾ ಕಚೇರಿ ಮೇಲೂ ದಾಳಿ ಮಾಡಲಾಗಿದೆ.

ಇದಲ್ಲದೆ ಬಿಸಿಎಂ ಇಲಾಖೆಯ ರಾಘವೇಂದ್ರ ಎಂಬವರ ಮನೆ ಮೇಲೆ ಸಹ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದು, ಶಿವಮೊಗ್ಗ ನಗರದ ಗೋಪಾಳ ಬಳಿಯ ಚಾಲುಕ್ಯನಗರದಲ್ಲಿನ ಮನೆಯಲ್ಲಿ ಬೆಳಗ್ಗೆಯಿಂದಲೂ ದಾಖಲೆಗಳ ಪರಿಶೀಲನೆ ನಡೆಸಲಾಗುತ್ತಿದೆ. 5 ತಂಡವಾಗಿ ಲೋಕಾಯುಕ್ತ ಅ ಕಾರಿಗಳು ದಾಳಿ ನಡೆಸಿ ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ. ಲೋಕಾಯುಕ್ತ ದಾವಣಗೆರೆ ಎಸ್ಪಿ ನೇತೃತ್ವದಲ್ಲಿ ಲೋಕಾ ಟೀಂ ದಾಳಿ ನಡೆಸಿದ್ದು, ಶಿವಮೊಗ್ಗ ಜೊತೆಗೆ ಹಾವೇರಿ, ದಾವಣಗೆರೆ ಅಧಿಕಾರಿಗಳು ಕೂಡ ಭಾಗಿಯಾಗಿದ್ದಾರೆ. 2ನೇಪುಟಕ್ಕೆ

# ಏ.9ಕ್ಕೆ ದ್ವಿತೀಯ ಪಿಯು ಫಲಿತಾಂಶ




**ಬೆಂಗಳೂರು,ಏ.7**– ದ್ವಿತೀಯ ಪಿಯುಸಿ ಪರೀಕ್ಷೆ –1 ಫಲಿತಾಂಶದ ದಿನಾಂಕ ಪ್ರಕಟಣೆ ಗೊಂದಲಕ್ಕೆ ತೆರೆಬಿದ್ದಿದ್ದು, ಕರ್ನಾಟಕ ಪರೀಕ್ಷಾ ಮಂಡಳಿಯು ಇದೇ 9ರಂದು ಗುರುವಾರ ಫಲಿತಾಂಶ ಪ್ರಕಟಿಸುವ ಸಾಧ್ಯತೆ ಇದೆ.

ಏ.9ರಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಸುದ್ದಿಗೋಷ್ಠಿ ನಡೆಸಿ ಫಲಿತಾಂಶ ಪ್ರಕಟಿಸಲಿದ್ದಾರೆ. ಅಧಿಕೃತ ವೆಬ್‌ಸೈಟ್‌ನಲ್ಲೂ ವಿದ್ಯಾರ್ಥಿ ಫಲಿತಾಂಶವನ್ನು ನೋಡಬಹುದಾಗಿದೆ. ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ಗುರುವಾರ ಮತದಾನ ನಡೆಯಲಿದೆ. ಇದರಿಂದಾಗಿ ರಾಜ್ಯದಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಕಾರಣ ಯಾವುದೇ ಪ್ರಮುಖ ಘೋಷಣೆಗಳನ್ನು ಮಾಡುವ ಮುನ್ನ ಚುನಾವಣಾ ಆಯೋಗದ ಅನುಮತಿ ಪಡೆಯುವುದು ಕಡ್ಡಾಯವಾಗಿದೆ. 2ನೇಪುಟಕ್ಕೆ

# ಬಾಲ್ಯ ಕಾರ್ಮಿಕ ಪದ್ಧತಿ ತಡೆಗೆ ವಿವಿಧ ಇಲಾಖೆಗಳು ಸಹಕಾರ ನೀಡಿ: ಎಡಿಸಿ ಶಿವಾನಂದ



ಧೈರ್ಯದ ದಾರಿ


**ರಾಯಚೂರು:** ಬಾಲ ಕಾರ್ಮಿಕ ಪದ್ಧತಿಯು ಒಂದು ಸಾಮಾಜಿಕ ಪಿಡುಗಾಗಿದ್ದು ಇದರ ನಿರ್ಮೂಲನೆ ಎಲ್ಲರೂ ಕೈಜೋಡಿಸಬೇಕೆಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಂಧಿಸಿದ ವಿವಿಧ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಏಪ್ರಿಲ್ 07ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡಲು ಎಲ್ಲಾ ಇಲಾಖೆಗಳ ಸಹಕಾರ ಹಾಗೂ ಸಮನ್ವಯದ ಅಗತ್ಯವಿದೆ. ಆದ್ದರಿಂದ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ನಿಷೇಧ ಮತ್ತು ನಿಯಂತ್ರಣ ಕಾಯ್ದೆಯಡಿ ಅಧಿಸೂಚಿಸಲ್ಪಟ್ಟ ಹನ್ನೊಂದು ಇಲಾಖೆಗಳ ಅಧಿಕಾರಿಗಳು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ತಪಾಸಣೆ ಅಥವಾ ಹಠಾತ್ ದಾಳಿ ಕೈಗೊಳ್ಳುವ ಸಂದರ್ಭಗಳಲ್ಲಿ ತಂಡದೊಂದಿಗೆ ಸಕ್ರಿಯವಾಗಿ ಭಾಗವಹಿಸಿ ಮಕ್ಕಳ ರಕ್ಷಣೆ ಹಾಗೂ ಪುನರ್‌ವಸತಿಗಾಗಿ ಕ್ರಮ ಕೈಗೊಂಡು ಈ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡ ಮಾಲೀಕರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ ಹಾಗೂ ತಿದ್ದುಪಡಿ ಕಾಯ್ದೆಯಡಿ ಪ್ರಕರಣ ದಾಖಲಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು. ಕಾರ್ಮಿಕ ಇಲಾಖೆ ಅಧಿಕಾರಿಗಳು ನಿಯಮಿತವಾಗಿ ತಪಾಸಣೆ ನಡೆಸಿ ಬಾಲ ಕಾರ್ಮಿಕರನ್ನು ರಕ್ಷಿಸಿ, ಪುನರ್ವಸತಿ ಕಲ್ಪಿಸಬೇಕು. ಗ್ಯಾರೇಜ್, ಕಾರ್ಖಾನೆ, ಹೋಟೆಲ್, ಅಂಗಡಿ, ಮತ್ತಿತರ ಅಪಾಯಕಾರಿ ಉದ್ಯೋಗದ ಸ್ಥಳಗಳಲ್ಲಿ ತಪಾಸಣೆ ಹೆಚ್ಚಿಸಬೇಕು. ತಪಾಸಣೆ ತೀವ್ರವಾದರೆ ಬಾಲ ಕಾರ್ಮಿಕರನ್ನು ಕೆಲಸದಲ್ಲಿ ತೊಡಗಿಸಿಕೊಳ್ಳಲು ಉದ್ಯೋಗದಾತರು ಹೆದರುತ್ತಾರೆ. ಪತ್ತೆ ಹಚ್ಚಿದ ಬಾಲ ಕಾರ್ಮಿಕರಿಗೆ ಪುನರ್ವಸತಿ 2ನೇಪುಟಕ್ಕೆ

# ಮಾನ್ವಿಯಲ್ಲಿ ಮೊಟ್ಟ ಮೊದಲು ಆಂಗ್ಲ ಮಾಧ್ಯಮ ಶಾಲೆ ಪ್ರಾರಂಭಿಸಿದ್ದು ಮಧುಸೂದನ್ ಗುಪ್ತಾಜೀಯವರು :ಜಿಶಾನ ಅಖಿಲ್ ಸಿದ್ದಿಕಿ ಸಿಂಡಿಕೇಟ್ ಸದಸ್ಯರು

ಧೈರ್ಯದ ದಾರಿ




**ಮಾನ್ವಿ:** ಮಾನ್ವಿ ಪಟ್ಟಣದಲ್ಲಿ ಮೊಟ್ಟ ಮೊದಲ ಆಂಗ್ಲ ಮಾಧ್ಯಮ ಶಿಕ್ಷಣವನ್ನು ಪ್ರಾರಂಭ ಮಾಡಿ ಹಲವಾರು ವಿದ್ಯಾರ್ಥಿಗಳಿಗೆ ದಾರಿದೀಪವಾದ ಮಧುಸೂದನ್ ಗುಪ್ತಾ ಜಿಯವರು ಮಾನ್ವಿ ಭಾಗದ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸೇವೆ ಅಪಾರವಾದದ್ದು ಎಂದು ಜಿಶಾನ ಅಕಿಲ್ ಸಿದ್ದಿಕಿ ಸಿಂಡಿಕೇಟ್ ಸದಸ್ಯರು ಆದಿಕವಿ ಶ್ರೀ ಮಹರ್ಷಿ ವಿಶ್ವ ವಿದ್ಯಾಲಯ ರಾಯಚೂರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪಟ್ಟಣದ ಶಾರದಾ ವಿದ್ಯಾನಿಕೇತನ ಶಿಕ್ಷಣ ಮಹಾವಿದ್ಯಾಲಯದಲ್ಲಿ ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳಿಂದ ಪ್ರಥಮ ವರ್ಷದ ಪ್ರಶಿಕ್ಷಣಾರ್ಥಿಗಳಿಗೆ ಸ್ವಾಗತ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಮಾನ್ವಿಯಲ್ಲಿ ಮೊಟ್ಟಮೊದಲ ಆಂಗ್ಲ ಮಾಧ್ಯಮ ಶಾಲೆಯನ್ನು 1991 ರಲ್ಲಿ ಪ್ರಾರಂಭಿಸಿ ಇಂದು ಬೃಹದಾಕರವಾಗಿ ಬೆಳೆದು ನಿಲ್ಲುವುದಕ್ಕೆ ಮಧುಸೂದಾನ್ ಗುಪ್ತಾ ಜೀ ಯವರ ಶೈಕ್ಷಣಿಕ ಸೇವೆ ಎಂದೆದಿಗೂ ಅಜರಾಮರವಾಗಿದೆ. ಶಾರದಾ ಶಿಕ್ಷಣ ಸಂಸ್ಥೆಯಲ್ಲಿ ಕಲಿತ ವಿದ್ಯಾರ್ಥಿಗಳು ಉನ್ನತವಾದ ಸ್ಥಾನಗಳನ್ನು ಪಡೆದು ಕೊಂಡಿದ್ದಾರೆ ಎಂದು ಹೇಳಿದರು.

ಇನ್ನೊರ್ವ ಮುಖ್ಯ ಅತಿಥಿಯಾದ ಶಿವಣ್ಣ ವಕೀಲರು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವ ವಿದ್ಯಾಲಯ ರಾಯಚೂರು ಆಗಮಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಹಳೆ ಬೇರು ಹೊಸ ಚಿಗುರು ಎಂಬ ಗಾದೆಯಂತೆ ಹೊಸದಾಗಿ ಕಾಲೇಜಿಗೆ ಬಂದ ವಿದ್ಯಾರ್ಥಿಗಳಿಗೆ ಸ್ವಾಗತಿಸುವುದು ಒಂದು ಸಂಪ್ರದಾಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಡಾ. ಹೈಂದವಿ ಮಾತನಾಡಿ ಸಂಸ್ಥೆ ಕಟ್ಟುವುದು ಬಹಳ ಸುಲಭ ಆದರೆ ಅದನ್ನ ನೆಡೆಸುವುದು ಬಹಳ ಕಷ್ಟ. ಮಧುಸೂದನ್ ಗುಪ್ತಾಜೀಯವರು ಮೊದಲು ಗುಡಿಸಲಲ್ಲಿ ಶಾಲೆಯನ್ನು ಪ್ರಾರಂಭಿಸಿ ಇಂದು ಭವ್ಯವಾದ ಕಟ್ಟದಲ್ಲಿ ಸಾವಿರಾರು ವಿದ್ಯಾರ್ಥಿಗಳು ಶಿಕ್ಷಣವನ್ನು ಕಲಿಯುತ್ತ ಇಂದು ಬೃಹದಾಕಾರವಾಗಿ ಬೆಳೆಯಲು ಸಾಧ್ಯವಾಗಿದೆ ಎಂದು ಹೇಳಿದರು.

ಸಂಸ್ಥೆಯ ಅಧ್ಯಕ್ಷರಾದ ಉಮಾಮಹೇಶ್ವರಿ, ಕಿಶೋರ್ ಕುಮಾರ, ಮಂಜಳಾ, ಡಾ.ಪರಮೇಶ್ವರಪ್ಪ ಗೋಪಶೆಟ್ಟಿ ಪ್ರಾಚಾರ್ಯರು, ಉಪಪ್ರಚಾರ್ಯರಾದ ವೀರಭದ್ರಯ್ಯ ಹಿರೇಮಠ ಉಪನ್ಯಾಸಕರಾದ ಈರಣ್ಣ ಮರ್ಲಟ್ಟಿ,ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳ ಪಾಲಕರದ ಮಲ್ಲಯ್ಯ ನಸಲಾಪುರ ಮಾನ್ವಿ ತಾಲೂಕಾಧ್ಯಕ್ಷರು ಕನಕ ಗುರುಪೀಠ ತಿಂತಣಿ ಬ್ರಿಡ್ಜ್ , ಶರಣಪ್ಪ ಸಾಹುಕಾರ ಬೀರಪ್ಪನವರು ಬೈಲ್ ಮರ್ಚೆಡ್ ಮತ್ತು ಬಿ.ಇಡಿ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು. ಪ್ರಿಯದರ್ಶಿನಿ ಮತ್ತು ವನಿತಾ ಪ್ರಶಿಕ್ಷಣಾರ್ಥಿಗಳು ನಿರೂಪಿಸಿದರು. ಸಹನಾ ಪ್ರಾರ್ಥಿಸಿದರು, ಜ್ಯೋತಿ ಸ್ವಾಗತಿಸಿದರು ಚೆನ್ನಬಸಮ್ಮ ವಂದಿಸಿದರು

# ಗಡಿ ಭಾಗದ ಮಕ್ಕಳ ಸಮಸ್ಯೆಗಳ ಪರಿಹಾರಕ್ಕೆ ಕ್ರಮ: ಅಪರ ಜಿಲ್ಲಾಧಿಕಾರಿ ಶಿವಾನಂದ




ಧೈರ್ಯದ ದಾರಿ

**ರಾಯಚೂರು:** ಕರ್ನಾಟಕ ಗಡಿ ಭಾಗಕ್ಕೆ ಹೊಂದಿಕೊಂಡಿರುವ ಕೃಷ್ಣಾ ಗ್ರಾಮದ ಕನ್ನಡ ಶಾಲೆಗೆ ರಾಯಚೂರಿನ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಏಪ್ರಿಲ್ 06ರ ಸೋಮವಾರ ದಂದು ಭೇಟಿ ನೀಡಿ, ಹಳೆ ವಿದ್ಯಾರ್ಥಿಗಳು ಹಾಗೂ ಶಾಲೆಯಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದು, ಗಡಿ ಪ್ರದೇಶದಲ್ಲಿನ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹಾರಕ್ಕೆ ಕ್ರಮ ಕೈಗೊಳ್ಳಲಾಗುವುದೆಂದರು.

ಕೃಷ್ಣಾವರೆಗೆ ಬಸ್ ವ್ಯವಸ್ಥೆ ಕಲ್ಪಿಸಲಾಗುವುದು. ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆಯಲ್ಲಿ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಸಂಬಂಧ ಪಟ್ಟ ಅಧಿಕಾರಿಗಳೊಂದಿಗೆ ಮಾತನಾಡಿ ಸೂಕ್ತ ಪರಿಹಾರ ಆಗುವಂತೆ ನೋಡಿಕೊಳ್ಳುತ್ತೇವೆ. ಪ್ರವೇಶಕ್ಕಾಗಿ ವಲಸೆ ಪ್ರಮಾಣ ಪತ್ರ ಹಾಗೂ ಇತರೆ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಹುಡುಕಿ ವಿದ್ಯಾರ್ಥಿಗಳಿಗೆ ಸಹಕಾರ ನೀಡಲಾಗುವುದು. ಉದ್ಯೋಗದಲ್ಲಿ ಶೇ.5ರಷ್ಟು ಮೀಸಲಾತಿ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳಿಗೆ ಪತ್ರದ ಮೂಲಕ ತಿಳಿಸುತ್ತೇವೆ ಎಂದು ಅಪರ ಜಿಲ್ಲಾಧಿಕಾರಿಗಳು ಹೇಳಿದರು.

ಗಡಿ ಶಾಲಾ ಮಕ್ಕಳು ಸುಮಾರು 51 ವರ್ಷಗಳಿಂದ 10ನೇ ತರಗತಿ ನಂತರ ಪ್ರವೇಶಕ್ಕಾಗಿ, ವಲಸೆ ಪ್ರಮಾಣ ಪತ್ರಕ್ಕಾಗಿ, ಹಾಸ್ಟೆಲ್, ಬಸ್ ಪಾಸ್, ಜಾತಿ ಪ್ರಮಾಣ ಪತ್ರ, ಶಿಷ್ಯ ವೇತನ, ಉದ್ಯೋಗಕ್ಕೆ ಸಂಬಂದ ಪಟ್ಟಂತೆ ಸಾಕಷ್ಟು ಸಮಸ್ಯೆಗಳು ಕಂಡು ಬರುತ್ತಿವೆ. ಕರ್ನಾಟಕ ಸರಕಾರ ಇದರ ಬಗ್ಗೆ ಕಾಳಜಿ ವಹಿಸಬೇಕು ಎಂದು ಕೃಷ್ಣಾ ಮಂಡಲದ ವಿದ್ಯಾಧಿಕಾರಿ ನಿಜಾಮುದ್ದೀನ್, ಗಡಿನಾಡು ಕನ್ನಡದ ಅಧ್ಯಕ್ಷರು ಮತ್ತು ಗೌರವ ಅಧ್ಯಕ್ಷರಾದ ಅಮರ್‌ದೀಕ್ಷಿತ್, ರಾಮಲಿಂಗಪ್ಪ ಕುನ್ನಿ ಅವರು ಅಪರ ಜಿಲ್ಲಾಧಿಕಾರಿ ಗಮನಕ್ಕೆ ತಂದರು.ಇದೇ ಸಂದರ್ಭದಲ್ಲಿ ರಾಯಚೂರು ತಹಶೀಲ್ದಾರ ಸುರೇಶ್ ವರ್ಮಾ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸೋಮಶೇಖರಪ್ಪ ಹೋಕ್ರಾಣಿ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಪ್ರವೀಣ್, ಸಾರ್ವಜನಿಕ ಶಿಕ್ಷಣ ಇಲಾಖೆಯ ರಂಗಸ್ವಾಮಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಶಿವಮಾನಪ್ಪ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ, ರಾಯಚೂರು ಬಿಇಒ ಈರಣ್ಣ ಕೋಸಗಿ, ಕೃಷ್ಣಾ ಮಂಡಲದ ತಹಶೀಲ್ದಾರರು ಶ್ರೀನಿವಾಸ್, ಕೃಷ್ಣಾ ಪ್ರೌಢ ಶಾಲೆಯ ಮುಖ್ಯಗುರು ಕಿಶೋರ್ ಕುಮಾರ್, ಶಾಲೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು, ಕೃಷ್ಣಾ ಗ್ರಾಮದ ಅಧ್ಯಕ್ಷರು ಎಸ್.ನಾಗೇಂದ್ರ ಹಾಗೂ ಶಾಲೆ ಹಳೆ ವಿದ್ಯಾರ್ಥಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬಸವಕಲ್ಯಾಣದ ಅರಿವಿನ ಗವಿಯಲ್ಲಿ ಹಡಪದ ಅಪ್ಪಣ್ಣನವರ ಮೂರ್ತಿ ಪುನಃ ಪ್ರತಿಷ್ಠಾಪಿಸಲು ಒತ್ತಾಯಿಸಿ ಮನವಿ



ಧೈರ್ಯದ ದಾರಿ

**ಸಿರವಾರ:** ಬೀದರ್ ಜಿಲ್ಲೆಯ ಬಸವಕಲ್ಯಾಣದ ಅನುಭವ ಮಂಟಪದ ತ್ರಿಪುರಾಂತಕ ಕೆರೆ ಬಳಿಯಿರುವ ಶಿವಶರಣ ಹಡಪದ ಅಪ್ಪಣ್ಣನವರ ಅರಿವಿನ ಗವಿಯಲ್ಲಿ ಅವರ ಮೂರ್ತಿಯನ್ನು ಪುನಃ ಪ್ರತಿಷ್ಠಾಪಿಸಬೇಕು ಎಂದು ಆಗ್ರಹಿಸಿ, ರಾಯಚೂರು ಜಿಲ್ಲೆ ಸಿರವಾರ ತಾಲೂಕಿನ ಹಡಪದ ಅಪ್ಪಣ್ಣ ಸಮಾಜದ ವತಿಯಿಂದ ಮಾನ್ಯ ತಹಶೀಲ್ದಾರರ ಮುಖಾಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

**ಐತಿಹಾಸಿಕ ಹಿನ್ನೆಲೆ:**
ಬಸವಕಲ್ಯಾಣದಲ್ಲಿ 12ನೇ ಶತಮಾನದ ಅನೇಕ ಬಸವಾದಿ ಶರಣರ ಅರಿವಿನ ಗವಿಗಳಿವೆ ಎಂಬುದು ಇತಿಹಾಸ ಪ್ರಸಿದ್ಧ. ವಿಶ್ವಗುರು ಬಸವಣ್ಣನವರ ಅರಿವಿನ ಗುಹೆಯ ಪಕ್ಕದಲ್ಲಿಯೇ ಅವರ ಆಪ್ತ ಕಾರ್ಯದರ್ಶಿಯಾಗಿದ್ದ ಶಿವಶರಣ ಹಡಪದ ಅಪ್ಪಣ್ಣನವರ ಅರಿವಿನ ಗವಿಯೂ ಅಸ್ತಿತ್ವದಲ್ಲಿದೆ.

**ಶರಣರ ಸಂಬಂಧ:**
ಹಡಪದ ಅಪ್ಪಣ್ಣನವರು ಕೇವಲ ಬಸವಣ್ಣನವರ ಆಪ್ತ ಕಾರ್ಯದರ್ಶಿಯಷ್ಟೇ ಅಲ್ಲದೆ, ಪ್ರಭುದೇವರು ಹಾಗೂ ಸಿದ್ಧರಾಮದೇವರ ಜೊತೆಗೆ ಬಸವಣ್ಣನವರಿಗೂ ಆಧ್ಯಾತ್ಮಿಕ ಗುರುಗಳಾಗಿದ್ದರು ಎಂಬುದನ್ನು ಸ್ವತಃ ಬಸವಣ್ಣನವರೇ ತಮ್ಮ ವಚನಗಳಲ್ಲಿ ಉಲ್ಲೇಖಿಸಿದ್ದಾರೆ. ಬಸವಣ್ಣನವರ ಜೀವನದ ಅಂತ್ಯದವರೆಗೂ ಅವರ ಜೊತೆಗಿದ್ದ 2ನೇಪುಟಕ್ಕೆ

ಮೊದಲನೇ ಪುಟದಿಂದ

# ರಾಜ್ಯದ ನಾಲ್ಕು ಜಿಲ್ಲೆಗಳಲ್ಲಿ ಲೋಕಾಯುಕ್ತ ದಾಳಿ

ಚಿತ್ರದುರ್ಗ,ಏ.7–ನಿವೃತ್ತ ಸರ್ಕಾರಿ ಮಹಿಳಾ ಅಧಿಕಾರಿ ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ಇಂದು ಬೆಳ್ಳಂಬೆಳಗ್ಗೆ ದಾಳಿ ನಡೆಸಿದ್ದಾರೆ. ನಿರ್ಮಿತಿ ಕೇಂದ್ರದ ಮಾಜಿ ಅಕೌಂಟೆಂಟ್ ಸುಶೀಲಮ ಅವರ ಮನೆ ಸೇರಿ ಹಲವು ಸ್ಥಳಗಳಲಲ್ಲಿ ಮೇಲೆ ಲೋಕಾಯುಕ್ತ ದಾಳಿ ನಡೆಸಿದೆ. ಸುಶೀಲಮ ಅವರು ಕಳೆದ ವರ್ಷದ ಹಿಂದೆ ವಿಆರ್‌ಎಸ್ ಪಡೆದಿದ್ದರು.

ಸೇವೆಯಲ್ಲಿದ್ದಾ ಭ್ರಷ್ಟಾಚಾರ ದೂರು ಬಂದಿತ್ತು ಈ ಹಿನ್ನೆಲೆ ಲೋಕಾಯುಕ್ತ ಅಧಿಕಾರಿಗಳು ಚಿತ್ರದುರ್ಗದ ಮೆದೇಹಳ್ಳಿ ಬಡಾವಣೆಯ ಮನೆ, ಹಿರಿಯೂರು ತಾಲೂಕಿನ ಯಾದಲಘಟ್ಟ ಗ್ರಾಮದ ತೋಟದ ಮನೆ ಮೇಲೆ ದಾಳಿ ನಡೆಸಿದ್ದಾರೆ. ಲೋಕಾಯುಕ್ತ ಎಸ್ಪಿ ವಾಸುದೇವರಾಮ್, ಡಿವೈಎಸ್ಪಿ ಮೃತ್ಯುಂಜಯ ನೇತೃತ್ವದಲ್ಲಿ ದಾಳಿ ನಡೆಸಿ ಪರಿಶೀಲನೆ ನಡೆಸುತ್ತಿದ್ದಾರೆ.

ಮನೆಯಲ್ಲಿ ಹಲವು ಆಸ್ತಿ ದಾಖಲಾತಿ ,ಹಾಗು ಭಾರಿ ಪ್ರಮಾಣದ ಚಿನ್ನಾಭರಣ ಪತ್ತೆಯಾಗಿದ್ದು ಇದರ ಅಂದಾಜು ಮೌಲ್ಯ ಮತ್ತು ಖರೀದಿ ಬಗ್ಗೆ ಮಾಹಿತಿ ಪಡೆಯಲಾಗುತ್ತಿದೆ.ಏಕಾಏಕಿ ಲೋಕಾಯುಕ್ತ ಪೊಲೀಸರು ಬಂದಾಗ ಸುಶೀಲಮ ಶಾಕ್ ಆಗಿದ್ದಾರೆ.ಸ್ವಯಂ ನಿವೃತ್ತ ಪಡೆದ ಮೇಲೂ ಲೋಕಾ ದಾಳಿ ಕುತೂಹಲ ಕೆರಳಿಸಿದೆ.

# ಬಾಲ್ಯ ಕಾರ್ಮಿಕ ಪದ್ಧತಿ ತಡೆಗೆ ವಿವಿಧ ಇಲಾಖೆಗಳು ಸಹಕಾರ ನೀಡಿ: ಎಡಿಸಿ ಶಿವಾನಂದ

ಕಲ್ಪಿಸಿ ಮುಖ್ಯವಾಹಿನಿಗೆ ತಂದರೆ ಭವಿಷ್ಯ ರೂಪಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ಹೇಳಿದರು. ಜಿಲ್ಲೆಯಲ್ಲಿ ಬಾಲ ಕಾರ್ಮಿಕರ ನಿಷೇಧ ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿದರೆ ಮಕ್ಕಳು ಬಾಲ ಕಾರ್ಮಿಕರಾಗುವುದನ್ನು ತಪ್ಪಿಸಬಹುದು. ಇಲ್ಲವಾದರೆ ಮಕ್ಕಳು ಕೊನೆಯವರೆಗೂ ಕಾರ್ಮಿಕರಾಗಿಯೇ ಉಳಿದುಬಿಡುತ್ತಾರೆ. ಬಾಲಕಾರ್ಮಿಕತೆ ಅಥವಾ ಬಿಡುಗಡೆಗೊಳಿಸಿದ ಮಕ್ಕಳ ಕುಟುಂಬಗಳಿಗೆ ಸಾಮಾಜಿಕ ಭದ್ರತೆ ಯೋಜನೆಯ ಸೌಲಭ್ಯಗಳನ್ನು ಒದಗಿಸುವ ಮುಖಾಂತರ ಈ ಮಕ್ಕಳ ಕುಟುಂಬಗಳನ್ನು ಆರ್ಥಿಕವಾಗಿ

ಸದೃಡರನ್ನಾಗಿಸಲು ವಿವಿಧ ಸೌಲಭ್ಯಗಳನ್ನು ಒದಗಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಇಲಾಖೆಯಿಂದ ಸೂಕ್ತ ನಿರ್ದೇಶನಗಳನ್ನು ನೀಡಬೇಕು ಅಪರ ಜಿಲ್ಲಾಧಿಕಾರಿ ಸೂಚಿಸಿದರು.

ಬಾಲ್ಯ ವಿವಾಹ ನಿಷೇಧ ಕಾಯ್ದೆ–2006ರ ಪ್ರಕಾರ 18ವರ್ಷದೊಳಗಿನ ಯಾವುದೇ ಹೆಣ್ಣು ಮಕ್ಕಳಿಗೆ ಹಾಗೂ 21 ವರ್ಷದೊಳಗಿನ ಗಂಡು ಮಕ್ಕಳಿಗೆ ಮದುವೆಯಾದಲ್ಲಿ ಅದನ್ನು ಬಾಲ್ಯ ವಿವಾಹ ಎಂದು ಪರಿಗಣಿಸಲಾಗಿದೆ. ಕಾಯ್ದೆಯ ಪ್ರಕಾರ ಬಾಲ್ಯ ವಿವಾಹ ಆದಲ್ಲಿ ಹುಡುಗ, ಹುಡುಗಿಯ ತಂದೆ ತಾಯಿ ಅಲ್ಲದೇ ಸಂಬಂಧಪಟ್ಟ ಎಲ್ಲರ ವಿರುದ್ಧ ತಪ್ಪಿತಸ್ಥರಿಗೆ ಕಾರಾಗೃಹವಾಸ ಹಾಗೂ ದಂಡ ವಿಧಿಸುವ ಅವಕಾಶವಿದ್ದು, ಕಾಯ್ದೆ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಹೆಚ್ಚುವರಿ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಪೊಲೀಸ್ ಇಲಾಖೆಯಿಂದ ಬಾಲ ಕಾರ್ಮಿಕರ ಪದ್ಧತಿ ನಿರ್ಮೂಲನೆಗೆ ಅಗತ್ಯ ಸಹಕಾರ ನೀಡಲಾಗುವುದು. ಜಿಲ್ಲೆಯ ಯಾವುದೇ ಠಾಣೆಯಲ್ಲಿ ಇಂತಹ ಪ್ರಕರಣಗಳನ್ನು ದಾಖಲಿಸಲು ಹಿಂದೇಟು ಹಾಕಿದ್ದಲ್ಲಿ, ತಕ್ಷಣ ನಮ್ಮ ಗಮನಕ್ಕೆ ತರಬೇಕೆಂದು ಕಾರ್ಮಿಕ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಕಾರ್ಮಿಕ ಇಲಾಖೆಯ ಜಿಲ್ಲಾ ಅಧಿಕಾರಿ ಆರತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ಪುಷ್ಪ, ರಾಯಚೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಂಜುನಾಥ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಏ.9ಕ್ಕೆ ದ್ವಿತೀಯ ಪಿಯು ಫಲಿತಾಂಶ

ಫಲಿತಾಂಶ ಬಿಡುಗಡೆ ಮಾಡಲು ಶಿಕ್ಷಣ ಇಲಾಖೆಯು ಚುನಾವಣಾ ಆಯೋಗದ ಅನುಮತಿಗಾಗಿ ಕಾಯುತ್ತಿದೆ. ಯಾವುದೇ ಕ್ಷಣದಲ್ಲಿ ಅನುಮತಿ ದೊರೆಯುವ ಸಂಭವಿದೆ. ಸಾಮಾನ್ಯವಾಗಿ ಫಲಿತಾಂಶವನ್ನು ಶಿಕ್ಷಣ ಸಚಿವರ ಉಪಸ್ಥಿತಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಪ್ರಕಟಿಸಲಾಗುತ್ತದೆ.ಆದರೆ, ನೀತಿ ಸಂಹಿತೆ ಇರುವುದರಿಂದ ಸಚಿವರು ಅಧಿಕೃತವಾಗಿ ಫಲಿತಾಂಶ ಪ್ರಕಟಿಸಲು ಚುನಾವಣಾ ಆಯೋಗದಿಂದ ಅನುಮತಿ ಪಡೆಯಬೇಕಾಗುತ್ತದೆ. ಹಾಗಾಗಿ ಆಯೋಗದಿಂದ ಅಧಿಕೃತ ಒಪ್ಪಿಗೆ ಸಿಗುವವರೆಗೂ ಮಂಡಳಿಯು ಯಾವುದೇ ದಿನಾಂಕವನ್ನು ಘೋಷಿಸಿರಲಿಲ್ಲ.

ಫೆ.28ರಿಂದ ಮಾರ್ಚ್ 17ವರೆಗೂ ದ್ವಿತಿಯ ಪಿಯುಸಿ ಪರೀಕ್ಷೆ ನಡೆದಿತ್ತು. ಪರೀಕ್ಷೆಯಲ್ಲಿ ಒಟ್ಟು 7,10,363 ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದರು. 1217 ಪರೀಕ್ಷಾ ಕೇಂದ್ರದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ ನಡೆದಿತ್ತು.
ಈ ವರ್ಷ 7.10 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ. ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗದ ವಿದ್ಯಾರ್ಥಿಗಳು ತಮ ಮುಂದಿನ ಭವಿಷ್ಯದ ಹಾದಿಯನ್ನು ನಿರ್ಧರಿಸಲು ಈ ಫಲಿತಾಂಶ ಬಹಳ ಮುಖ್ಯವಾಗಿದೆ.

# ಬಸವಕಲ್ಯಾಣದ ಅರಿವಿನ ಗವಿಯಲ್ಲಿ ಹಡಪದ ಅಪ್ಪಣ್ಣನವರ ಮೂರ್ತಿ ಪುನಃ ಪ್ರತಿಷ್ಠಾಪಿಸಲು ಒತ್ತಾಯಿಸಿ ಮನವಿ

ಏಕೈಕ ಶರಣರೆಂದರೆ ಅದು ಹಡಪದ ಅಪ್ಪಣ್ಣನವರು ಎನ್ನುವುದಕ್ಕೆ ಸೂಕ್ತ ದಾಖಲೆಗಳಿವೆ ಎಂದು ಸಮಾಜದ ಮುಖಂಡರಾದ ಚಂದ್ರು ಹಡಪದ ಈ ಸಂದರ್ಭದಲ್ಲಿ ಪ್ರತಿಪಾದಿಸಿದರು.
ಈ ಕೂಡಲೇ ಸರ್ಕಾರ ಹಾಗೂ ಸಂಬಂಧಪಟ್ಟ ಇಲಾಖೆಗಳು ಗಮನಹರಿಸಿ, ಅಪ್ಪಣ್ಣನವರ ಅರಿವಿನ ಗವಿಯಲ್ಲಿ ಅವರ ಮೂರ್ತಿಯನ್ನು ಮರು ಪ್ರತಿಷ್ಠಾಪಿಸುವ ಮೂಲಕ ಇತಿಹಾಸಕ್ಕೆ ಗೌರವ ನೀಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.
ಈ ಸಂದರ್ಭದಲ್ಲಿ ಹಡಪದ ಅಪ್ಪಣ್ಣ ಸಮಾಜದ ಪ್ರಮುಖರು ಹಾಗೂ ಮುಖಂಡರು ಉಪಸ್ಥಿತರಿದ್ದರು.

# ಏಪ್ರಿಲ್ 12ರಂದು ವಸತಿ ಶಾಲೆಗಳ 6ನೇ ತರಗತಿ ಪ್ರವೇಶ ಪರೀಕ್ಷೆ

**ರಾಯಚೂರು:** ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2026–27ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶ ಪರೀಕ್ಷೆಯನ್ನು ಏಪ್ರಿಲ್ 12ರಂದು ಜಿಲ್ಲೆಯ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಏಕಕಾಲಕ್ಕೆ ಜರುಗಲಿದ್ದು, ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳು ಈ ಪರೀಕ್ಷೆಗೆ ಕಡ್ಡಾಯವಾಗಿ ಹಾಜರಾಗುವಂತೆ ಕೋರಲಾಗಿದೆ.

ಜಿಲ್ಲೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ರಾಯಚೂರು (ಬೋಳಮಾನದೊಡ್ಡಿ ರಸ್ತೆ), ಗಿಲ್ಲೇಸೂಗೂರು (ಚಂದ್ರಬಂಡಾ ರಸ್ತೆ), ಯರಮರಸ್ ಕ್ಯಾಂಪ್, ಗಿಲ್ಲೆಸುಗೂರು ಕ್ಯಾಂಪ್, ಮಾನವಿ, ಸಿಂಧನೂರು, ಚನ್ನಹಳ್ಳಿ, ಮಸ್ಕಿ, ಲಿಂಗಸೂಗೂರು, ಸಿರವಾರ, ದೇವದುರ್ಗ ಮತ್ತು ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ, ಯರಮರಸ್ ಕ್ಯಾಂಪ್ ರಾಯಚೂರಿನಲ್ಲಿ 6ನೇ ತರಗತಿಯಿಂದ 10ನೇ ತರಗತಿಯ ವರೆಗೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75 ರಷ್ಟು ಸ್ಥಾನಗಳನ್ನು ಮತ್ತು ಶೇ.25 ರಷ್ಟು ಸ್ಥಾನಗಳನ್ನು ಇತರೆ ವರ್ಗದವರಿಗೆ ಮೀಸಲಿರಿಸಿ, ಪ್ರಸ್ತುತ ಕರ್ನಾಟಕದ ಸರ್ಕಾರದ/ಅಂಗೀಕೃತ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳಿಂದ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದಿಸ್ಟ್, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳು ಮತ್ತು ಪ.ಜಾತಿ/ಪ.ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಗೆ ಆನ್‌ಲೈನ್ ಸೇವಾಸಿಂಧು ವಿಳಾಸ: https://erp.dom.karnataka.gov.in/adm/Admission/StudentHallticket ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತು. ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳಿಗೆ ದಿನಾಂಕ:12.04.2026 ಭಾನುವಾರದಂದು ಪ್ರವೇಶ ಪರೀಕ್ಷೆಯು ಜಿಲ್ಲೆಯ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಏಕಕಾಲಕ್ಕೆ ಜರುಗಲಿದ್ದು, ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳು ಸದರಿ ಪರೀಕ್ಷಗೆ ಕಡ್ಡಾಯವಾಗಿ ಹಾಜರಾಗುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ: ಅಲ್ಪಸಂಖ್ಯಾತರ ಸಹಾಯವಾಣಿ 8277799990, 08022535902, ರಾಯಚೂರು 8496098631, 9731028420, 9731341815, 9686853719, 6361866571, 9108175899 ಅಥವಾ 9902906266, ಮಾನವಿ, ಸಿರವಾರ 7411771075, 886733478, ದೇವದುರ್ಗ 9731794252, 9148233616, ಲಿಂಗಸೂಗೂರು, ಮಸ್ಕಿ ಮತ್ತು ಸಿಂಧನೂರು 8217621732, 9740871306 ಅಥವಾ 8660879712ಗೆ ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉಡಮಗಲ ಖಾನಾಪುರ ಶಾಲೆಯಲ್ಲಿ ವಿಶ್ವ ಆರೋಗ್ಯ ದಿನಾಚರಣೆ

# “ಆರೋಗ್ಯ ಕಾಪಾಡಿ, ಭವಿಷ್ಯ ಕಟ್ಟಿರಿ: ಡಾ. ದಂಡಪ್ಪ ಬಿರಾದಾರ್ ಕರೆ”



ಧೈರ್ಯದ ದಾರಿ

**ರಾಯಚೂರು:** ಆರೋಗ್ಯವು ಚೆನ್ನಾಗಿ ಇರಬೇಕಾದರೆ ನಾವುಗಳು ಪ್ರತಿನಿತ್ಯ ಸರಿಯಾದ ರೀತಿಯಲ್ಲಿ ಆರೋಗ್ಯ ಚಟುವಟಿಕೆಗಳನ್ನು ಮಾಡಬೇಕು. ಜಂಗು ಫುಡ್ ನಿಂದ ದೂರವಿರಬೇಕು. ಸರಿಯಾಗಿ ನಿದ್ದೆಯನ್ನು ಮಾಡಬೇಕು. ಧ್ಯಾನ ಮತ್ತು ಪ್ರಾಣಾಯಾಮ ಕಡೆಗೆ ಹೆಚ್ಚು ಒತ್ತುಕೊಟ್ಟು. ಅಭ್ಯಾಸವನ್ನು ರೂಢಿಸಿಕೊಳ್ಳಬೇಕು. ದುರಭ್ಯಾಸಗಳಿಂದ ದೂರವಿರಬೇಕು. ಸ್ವಲ್ಪ ಆರೋಗ್ಯದಲ್ಲಿ ವ್ಯತ್ಯಾಸವಾದ ತಕ್ಷಣವೇ ನಿಯಮಿತವಾದ ತಪಾಸಣೆ ಕಾರ್ಯವನ್ನು ಮಾಡಿಸಿಕೊಳ್ಳಬೇಕು.

ವೈಯಕ್ತಿಕ ಸ್ವಚ್ಛತೆ ಬಗ್ಗೆ ಹೆಚ್ಚು ಗಮನವನ್ನು ಕೊಡಬೇಕು .ಸ್ವಚ್ಛತೆ ಮತ್ತು ಜಾಗೃತಿ ಆರೋಗ್ಯದ ರಹಸ್ಯವಾಗಿದೆ. ಆದ್ದರಿಂದ ಉತ್ತಮ ಆರೋಗ್ಯವೇ ನಿಜವಾದ ಸಂಪತ್ತು ಎಂದು ರಾಯಚೂರು ತಾಲೂಕಿನ ಸರ್ಕಾರಿ ಪ್ರೌಢಶಾಲೆ ಉಡಮಗಲ ಖಾನಾಪುರದಲ್ಲಿ ವಿಶ್ವ ಆರೋಗ್ಯ ದಿನಾಚರಣೆ ಹಾಗೂ ಬೇಸಿಗೆಯಲ್ಲಿ ಆರೋಗ್ಯದ ಕುರಿತು ನಡೆದ ಕಾರ್ಯಕ್ರಮವನ್ನು ಸಸಿಗೆ ನೀರು ಹಾಕುವುದರ ಮೂಲಕ ಉದ್ಘಾಟಿಸಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಶಿಕ್ಷಣ ವಿಭಾಗದ ಜಿಲ್ಲಾ ಸಂಚಾಲಕ ಡಾ. ದಂಡಪ್ಪ ಬಿರಾದಾರ್ ಮಾತನಾಡಿದರು.
ಅವರು ಮುಂದುವರೆದು ಮಾತನಾಡುತ್ತಾ 1948 ರಲ್ಲಿ ವಿಶ್ವ ಆರೋಗ್ಯ ಸಂಸ್ಥೆ. ಸಭೆಯಲ್ಲಿ ಚರ್ಚೆ ನಂತರ ಅಧಿಕೃತವಾಗಿ 1950 ರಿಂದ ಪ್ರತಿ ಏಪ್ರಿಲ್ ಏಳರಂದು ವಿಶ್ವ ಆರೋಗ್ಯ ದಿನಾಚರಣೆಯನ್ನು ಆಚರಣೆ ಮಾಡಲಾಗುತ್ತದೆ. ವಿಶ್ವ ಆರೋಗ್ಯ ದಿನಾಚರಣೆಯ ಸಂದರ್ಭದಲ್ಲಿ ಪ್ರತಿ ವರ್ಷವೂ ಹಲವಾರು ಘೋಷಣೆಗಳನ್ನು ಹೇಳಲಾಗುತ್ತದೆ ಹಲವಾರು ಧ್ಯೇಯ ವಾಕ್ಯಗಳನ್ನ ಇರುತ್ತದೆ. ಆರೋಗ್ಯವೇ ಭಾಗ್ಯ.ನನ್ನ ಆರೋಗ್ಯ ನನ್ನ ಹಕ್ಕು. ಎಲ್ಲರಿಗೂ ಆರೋಗ್ಯ ಎಲ್ಲೆಡೆ ಇರಲಿ.
ಸಂತೋಷಕರ ಜೀವನಕ್ಕಾಗಿ ವ್ಯಾಯಾಮ ಮಾಡಿ.ಆರೋಗ್ಯ ಉಳಿಸಿ ನಿಮ್ಮ ಆರೋಗ್ಯವೇ ನಿಮ್ಮ ನಿಜವಾದ ಸಂಪತ್ತು. ಭರವಸೆಯ ಭವಿಷ್ಯ ನರ್ಸುಗಳು ಮತ್ತು ಮಿಡ್ ವೈಫ್ ಗಳನ್ನು ಬೆಂಬಲಿಸಿ.ಈ ರೀತಿಯಾಗಿ ವಿಶ್ವ ಆರೋಗ್ಯ ದಿನದ ಘೋಷಣೆಗಳು ಇರುತ್ತವೆ.ವಿದ್ಯಾರ್ಥಿಗಳೇ ಬೇಸಿಗೆ ರಜೆ ಬಂದಿದೆ ಈ ರಜೆಯಲ್ಲಿ ಅನವಶ್ಯಕವಾಗಿ ಹೊರಗಡೆ ತಿರುಗಾಡಲು ಹೋಗಬೇಡಿ.ನಿಮ್ಮ ಆರೋಗ್ಯ ನಿಮ್ಮ ಕೈಯಲ್ಲಿ.ಬೇಸಿಗೆ ರಜೆಯಲ್ಲಿ ತಾವು ಉತ್ತಮವಾದ ಆರೋಗ್ಯ ಕಾಪಾಡಿಕೊಂಡು ಚೆನ್ನಾಗಿದ್ದು.ಶೈಕ್ಷಣಿಕ ಪಠ್ಯಪುಸ್ತಕಗಳು ಅಭ್ಯಾಸ ಮಾಡಿರಿ.ಜೊತೆಗೆ ಬರವಣಿಗೆ ಸಹ ಅಭ್ಯಾಸ ಮಾಡಿರಿ. ನಿಮ್ಮ ಆರೋಗ್ಯ ಸದಾ ಚೆನ್ನಾಗಿರಲೆಂದು ಡಾ ಬಿರಾದಾರ ಹೇಳಿದರು ಈ ಸಂದರ್ಭದಲ್ಲಿ ಶಾಲಾ ಶಿಕ್ಷಕರ ವೃಂದ ನಫಿಜಾ ಅಂಜುಮ್. ಸರಸ್ವತಿ.ಅನಿತಾ ಎನ್.. ಶಿವಲೀಲಾ ..ಸಾವಿತ್ರಿ ವೀಣಾ ಕುಲಕರ್ಣಿ ವಿದ್ಯಾರ್ಥಿಗಳು ಉಪಸ್ಥಿತರಿದ್ದರು . ಅರ್ಚನಾ ಸ್ವಾಗತಿಸಿದಳು. ಪೂರ್ಣಿಮಾ ವಂದಿಸಿದಳು.

# ಏಪ್ರಿಲ್ 8ರಂದು ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

**ರಾಯಚೂರು:** ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು 2026ರ ಏಪ್ರಿಲ್ 8ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅವರು ಏಪ್ರಿಲ್ 7ರ ಸಂಜೆ 5ಗಂಟೆಗೆ ದಾವಣಗೆರೆಯಿಂದ ನಿರ್ಗಮಿಸಿ, ರಾತ್ರಿ 11ಗಂಟೆಗೆ ರಾಯಚೂರು ನಗರಕ್ಕೆ ಆಗಮಿಸಲಿದ್ದಾರೆ.

ಏಪ್ರಿಲ್ 8ರ ಬೆಳಿಗ್ಗೆ 10.30ಕ್ಕೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಗಳ ಕಚೇರಿಯ ಸಭಾಂಗಣದಲ್ಲಿ ರಾಯಚೂರು ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆಗಳು ಮತ್ತು ಜಾನುವಾರುಗಳಿಗೆ ಮೇವಿನ ಲಭ್ಯತೆಯ ಕುರಿತು ಜಿಲ್ಲಾಡಳಿತದೊಂದಿಗಿನ ಸಭೆಯಲ್ಲಿ ಭಾಗವಹಿಸುವರು.

ಮಧ್ಯಾಹ್ನ 12.30ಕ್ಕೆ ಎಪಿಎಮ್‌ಸಿ ಕಲ್ಯಾಣ ಮಂಟಪದಲ್ಲಿ ಮದುವೆ ಸಮಾರಂಭದಲ್ಲಿ ಭಾಗವಹಿಸುವರು.

ಮಧ್ಯಾಹ್ನ 2.30ಕ್ಕೆ ರಾಯಚೂರಿನಿಂದ ರಸ್ತೆ ಮಾರ್ಗವಾಗಿ ಕಲಬುರಗಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಿಂಗಸುಗೂರು ಎಮ್.ಸಿ.ಹೆಚ್ ಆಸ್ಪತ್ರೆ: ವಿವಿಧ ಹುದ್ದೆಗಳ ಆಯ್ಕೆ ನೇರ ಸಂದರ್ಶನ

**ರಾಯಚೂರು:** ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲೂಕಿನಲ್ಲಿ ನೂತನವಾಗಿ ನಿರ್ಮಾಣಗೊಂಡ 100 ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳಿಗೆ ರೋಷ್ಟರ್ ಮತು ಮೇರಿಟ್ ಆಧರಿಸಿ ಎನ್.ಹೆಚ್.ಎಮ್ ನಿಬಂಧನೆಗೊಳಪಟ್ಟು ಆರ್ಹ ಆಭ್ಯರ್ಥಿಗಳಿಂದ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ನೇರ ಸಂದರ್ಶನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಸ್ತ್ರೀರೋಗ ತಜ್ಞ 01 ಹುದ್ದೆಗೆ ಎಂ.ಬಿ.ಬಿ.ಎಸ್. ಎಂ.ಎಸ್ ಓಬಿಜಿ ವಿದ್ಯಾರ್ಹತೆ ಹೊಂದಿರಬೇಕು. 45 ವರ್ಷದೊಳಗಿರಬೇಕು. ಜನರಲ್ ಮೆಡಿಸಿನ್ 01 ಹುದ್ದೆಗೆ ಎಂ.ಬಿ.ಬಿ.ಎಸ್ ಡಿ.ಸಿ.ಹೆಚ್, ಎಂ.ಡಿ ಪೀಡಿಯಾಟ್ರಿಕ್, ಡಿಎನ್ ಬಿ ಪೀಡಿಯಾಟ್ರಿಕ್ ವಿದ್ಯಾರ್ಹತೆ ಹೊದಿರಬೇಕು. 45 ವರ್ಷದೊಳಗಿರಬೇಕು. ವೈದ್ಯಾಧಿಕಾರಿ 03 ಹುದ್ದೆಗೆ ಎಂ.ಬಿ.ಬಿ.ಎಸ್ ವಿದ್ಯಾರ್ಹತೆ ಹೊಂದಿರಬೇಕು. 45 ವರ್ಷದೊಳಗಿರಬೇಕು. ಈ ಹುದ್ದೆಗಳಿಗೆ ಎನ್.ಹೆಚ್.ಎಂ ಮಾರ್ಗಸೂಚಿಗಳ ಪ್ರಕಾರ ದಿನಾಂಕ: 10–04–2026 ರಂದು ವಾಕ್–ಇನ್ ಸಂದರ್ಶನ ನಡೆಸಲಾಗುವುದು.

ಸ್ಟಾಫ್ ನರ್ಸ್ 28 ಹುದ್ದೆಗಳಿಗೆ ಜಿ.ಎನ್.ಎಂ ಅಥವಾ ಬಿ.ಎಸ್.ಸಿ ನರ್ಸಿಂಗ್ + 2 ವರ್ಷ ಅನುಭವದ ಎನ್.ಹೆಚ್.ಎಂ ಮಾರ್ಗಸೂಚಿಗಳ ಪ್ರಕಾರ ಮಾರ್ಗಸೂಚಿಗಳ ಪ್ರಕಾರ ಏಪ್ರಿಲ್ 16ರವರೆಗೆ ಕಚೇರಿ ಸಮಯದಲ್ಲಿ ಅರ್ಜಿ ಸಲ್ಲಿಸಬಹುದು. ನಂತರ ಬಂದ ಆರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಹುದ್ದೆಗಳ ನೇಮಕಾತಿ ಸಂದರ್ಭದಲ್ಲಿ ಚಾಲ್ತಿಯಲ್ಲಿರುವ ಎನ್.ಹೆಚ್.ಎಮ್ ನಿಯಮಾನುಸಾರ ಹಾಗೂ ಟಿ.ಓ.ಆರ್ ಮೇರೆಗೆ ರೋಷ್ಟರ್ ಮತು ಮೇರಿಟ್ ಆಧರಿಸಿ ನೇಮಕಾತಿ ಮಾಡಲಾಗುವುದು. ಆಯ್ಕೆ ಪ್ರಕ್ರಿಯೆಯಲ್ಲಿ ನೇಮಕಾತಿ ಸಮಿತಿಯ ತೀರ್ಮಾನವೇ. ಅಂತಿಮವಾಗಿರುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ಏಪ್ರಿಲ್ 09ರಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

**ರಾಯಚೂರು:** ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಎಪ್ರಿಲ್ 20ರಂದು ಬಸವ ಜಯಂತಿ, ಏಪ್ರಿಲ್ 21ರಂದು ಶ್ರೀಶಂಕರಾಚಾರ್ಯ ಜಯಂತಿ, ಏಪ್ರಿಲ್ 23ರಂದು ಭಗಿರಥ ಜಯಂತಿ ಹಾಗೂ ಮೇ. 01ರಂದು ಭಗವಾನ್ ಬುದ್ಧ ಜಯಂತಿ ನಡೆಯಲಿವೆ.

ಈ ಜಯಂತಿಗಳ ಅಂಗವಾಗಿ ಏಪ್ರಿಲ್ 09ರ ಬೆಳಿಗ್ಗೆ 10ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಾರಿ ಡಿಕ್ಕಿ: ಬೈಕ್ ಸವಾರ ಸ್ಥಳದಲ್ಲೇ ಸಾವು

**ಕಲಬುರಗಿ,ಏ.7**–ಲಾರಿ ಡಿಕ್ಕಿ ಹೊಡೆದು ಬೈಕ್ ಸವಾರನೊಬ್ಬ ಸ್ಥಳದಲ್ಲೇ ಮೃತಪಟ್ಟ ಘಟನೆ ನಗರದ ಶಹಾಬಾದ ರಿಂಗ್ ರೋಡ್ ಸರ್ಕಲ್ ಹತ್ತಿರ ಇಂದು ಬೆಳಿಗ್ಗೆ ನಡೆದಿದೆ.




ನಗರದ ಓಝಾ ಲೇಔಟ್‌ನ ಸಂತೋಷ ಸೂರ್ಯಕಾಂತ ಬೌಳಿಗಾರ (44) ಮೃತಪಟ್ಟವರು.
ಸಂಚಾರಿ ಪೊಲೀಸ್ ಠಾಣೆ–1ರಲ್ಲಿ ಪ್ರಕರಣ ದಾಖಲಾಗಿದೆ. ತನಿಖೆ ನಡೆದಿದೆ.

# ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಬಿಜೆಪಿ ಸಂಸ್ಥಾಪನ ದಿನಾಚರಣೆ ಆಚರಣೆ



**ಬೀದರ :ಏ.7:** ನಗರದ ನೌಬಾದನಲ್ಲಿರುವ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಪಕ್ಷದ ಸಂಸ್ಥಾಪನಾ ದಿನಾಚರಣೆಯನ್ನು ಆಚರಿಸಲಾಗುತ್ತಿದೆ.
ಇಂದು ಬೆಳಿಗ್ಗೆ 8.30 ಗಂಟೆಗೆ ಬಿಜೆಪಿ ಜಿಲ್ಲಾ ಅಧ್ಯಕ್ಷರಾದ ಸೋಮನಾಥ ಪಟೀಲ ಅವರು ಪಕ್ಷದ ಧ್ವಜಾರೋಹಣ ಮಾಡಿದರು. ಈ ಸಂದರ್ಭದಲ್ಲಿ ರಾಜ್ಯ ಕಾರ್ಯದರ್ಶಿ ಹಾಗೂ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಬುಡಾ ಮಾಜಿ ಅಧ್ಯಕ್ಷ ಬಾಬುವಾಲಿ, ಬಿಜೆಪಿ ನಾಯಕ ಈಶ್ವರ ಸಿಂಗ್ ಠಾಕೂರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ, ಜಿಲ್ಲಾ ಉಪಾಧ್ಯಕ್ಷರಾದ ಬಸವರಾಜ ಪವಾರ, ರಾಜಕುಮಾರ ನೇಮತಾಬಾದ, ಸುಭಾಷ ಮಡಿವಾಳ, ನಗರ ಘಟಕ ಅಧ್ಯಕ್ಷರಾದ ಶಶಿ ಹೊಸಳ್ಳಿ ಗ್ರಾಮಾಂತರ ಘಟಕದ ಅಧ್ಯಕ್ಷರಾದ ದೀಪಕ ಗಾದಗೆ , ಶ್ರೀಮತಿ ಶಂಕುತಲಾ ಬೆಲ್ದಾಳೆ, ಉಲ್ಲಾಸನಿ ಮುದಾಳೆ, ಮಹಾನಂದ ಪಾಟೀಲ, ವಿಜಯಲಕ್ಷ್ಮೀ ಕೌಡಗೆ, ರಾಜಶೇಖರ ನಾಗಮೂರ್ತಿ ಬಾಬುರಾವ ಕಾರುಬಾರಿ ವೀರು ದಿಗ್ವಾಲ್ , ಉಪೇಂದ್ರ ದೇಶಪಾಂಡೆ, ರೋಶನ್ ವರ್ಮಾ, ಗಣೇಶ ಭೋಸ್ಲೆ, ರಾಜೇಂದ್ರ್ ಪೂಜಾರಿ ಶ್ರೀನಿವಾಸ ಚೌದರಿ ಸೇರಿದಂತೆ ಅನೇಕ ಬಿಜೆಪಿ ಮುಖಂಡರು ಉಪಸ್ಥಿತರಿದ್ದರು. ಬಿಜೆಪಿ ಸಂಸ್ಥಾಪನ ದಿನಾಚರಣೆ ನಿಮಿತ್ತ ಜಿಲ್ಲಾ ಕಚೇರಿಗೆ ವಿದ್ಯುತ್ ದೀಪಲಾಂಕರ ಮಾಡಲಾಯಿತು.

# 27 ಕೋಟಿ ಮೌಲ್ಯದ ಡ್ರಗ್ಸ್ ಜಪ್ತಿ

**ಯಲಹಂಕ: ಉಪನಗರ ಪೊಲೀಸ್ ಠಾಣೆ ಪೊಲೀಸರು ಡ್ರಗ್ಸ್ ಪ್ಲೆಡರ್‌ಗಳಿಂದ ವಶಪಡಿಸಿಕೊಂಡಿರುವ ಡ್ರಗ್ಸ್ ಅನ್ನು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್‌ರವರು ಪರಿಶೀಲನೆ ನಡೆಸಿದರು. ಪೊಲೀಸ್ ಅಧಿಕಾರಿಗಳು ಇದ್ದಾರೆ.**



**ಬೆಂಗಳೂರು,ಏ.7–**ಹೆಬ್ಬಗೋಡಿ, ಯಲಹಂಕ ಉಪನಗರ, ಮೈಕೋಲೇಔಟ್, ಪರಪ್ಪನ ಅಗ್ರಹಾರ, ಬಾಗಲೂರು ಹಾಗೂ ಬಾಣಸವಾಡಿ ಠಾಣಾ ವ್ಯಾಪ್ತಿಯಲ್ಲಿ ವಿದೇಶಿ ಪ್ರಜೆ, ಹೊರರಾಜ್ಯದ ನಾಲ್ವರು ಸೇರಿ 8 ಮಂದಿ ಡ್ರಗ್ ಫೆಡ್ಲರ್ ಗಳನ್ನು ಬಂಧಿಸಿ 27.42 ಕೋಟಿ ಮೌಲ್ಯದ ಮಾದಕವಸ್ತುಗಳನ್ನು ನಗರ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಬಂಧಿತ ಆರೋಪಿಗಳಿಂದ 2.85 ಲಕ್ಷ ನಗದು ಸೇರಿ 27.42 ಕೋಟಿ ಮೌಲ್ಯದ 12 ಕೆಜಿ 91 ಗ್ರಾಂ ಎಂಡಿಎಂಎ, 275 ಗ್ರಾಂ ಕೊಕೇನ್ 34 ಕೆಜಿ 802 ಗ್ರಾಂ ಗಾಂಜಾ, 40 ಗ್ರಾಂ ಚಿನ್ನಾಭರಣ, ಕೃತ್ಯಕ್ಕೆ ಬಳಸಿದ್ದ 2 ದ್ವಿಚಕ್ರ ವಾಹನ ಕಾರು, 2 ಮೊಬೈಲ್ ಗಳನ್ನು ವಶಪಡಿಸಿಕೊಂಡು ಹೆಚ್ಚಿನ ತನಿಖೆಯನ್ನು ಕೈಗೊಳ್ಳಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಹೆಬ್ಬಗೋಡಿ ಪೊಲೀಸರು ನೈಜೀರಿಯಾದ ಇಮ್ಯಾನುಯಲ್ (41)ನನ್ನು ಬಂಧಿಸಿ 2.85 ಲಕ್ಷ ನಗದು 12 ಕೆಜಿ 55 ಗ್ರಾಂ ಎಂಡಿಎಂಎ, 275 ಗ್ರಾಂ ಕೊಕೇನ್,2 ಮೊಬೈಲ್ ಕಾರು ಸೇರಿ 25 ಕೋಟಿ,63 ಲಕ್ಷ 95 ಸಾವಿರ ಮೌಲ್ಯದ ಮಾಲುಗಳನ್ನು ಜಪ್ತಿ ಮಾಡಲಾಗಿದೆ ಎಂದು ಹೇಳಿದರು.
ಯಲಹಂಕ ಪೊಲೀಸರು ಕೇರಳದ ಮೊಹಮ್ಮದ್ ನಿಶಾದ್,ಆದೇಶ್ ನನ್ನು ಬಂಧಿಸಿ 10.50ಲಕ್ಷ ಮೌಲ್ಯದ 21ಕೆಜಿ 125 ಗ್ರಾಂ ಗಾಂಜಾ ಜಪ್ತಿ ಮಾಡಿದರೆ,ಮೈಕೋ ಲೇಔಟ್ ಪೊಲೀಸರು ಅಸ್ಸಾಂ ನ ಬೊಬ್ಬಿನಾಯ್ಡು ನನ್ನು ಬಂಧಿಸಿ 3.50 ಲಕ್ಷ ಮೌಲ್ಯದ 6 ಕೆಜಿ 400ಗ್ರಾಂ ಗಾಂಜಾ ಜಪ್ತಿ ಮಾಡಿದ್ದಾರೆ ಎಂದು ತಿಳಿಸಿದರು.

ಬಾಗಲೂರು ಪೊಲೀಸರು ಯಲಹಂಕದ ಮೊಹಮ್ಮದ್ ನಾಸೀರ್ ನನ್ನು ಬಂಧಿಸು 1ಲಕ್ಷ ಮೌಲ್ಯದ ಡ್ರಗ್ಸ್ ವಶಪಡಿಸಿಕೊಂಡರೆ, ಪರಪ್ಪನ ಅಗ್ರಹಾರ ಪೊಲೀಸರು 2ಲಕ್ಷ ಮೌಲ್ಯದ ಗಾಂಜಾ ಜಪ್ತಿಮಾಡಿ ಆರೋಪಿಯೊಬ್ಬನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ತಿಳಿಸಿದರು.
ಆರೋಪಿಗಳು ಹೆಚ್ಚಿನ ಹಣ ಗಳಿಸುವ ಉದ್ದೇಶದಿಂದ, ವಿದೇಶಿ ಮೂಲದ, ಹೊರರಾಜ್ಯದ ಮತ್ತು ಸ್ಥಳೀಯ ಅಪರಿಚಿತ ವ್ಯಕ್ತಿಗಳಿಂದ ನಿಷೇಧಿತ ಮಾದಕ ವಸ್ತುಗಳಾದ ಎಂಡಿಎಂಎ, ಕೊಕೇನ್ ಮತ್ತು ಗಾಂಜಾವನ್ನು ಕಡಿಮೆ ಬೆಲೆಗೆ ಖರೀದಿಸಿಕೊಂಡು ಬಂದು ಸಾರ್ವಜನಿಕರಿಗೆ, ಕಾಲೇಜು ವಿದ್ಯಾರ್ಥಿಗಳಿಗೆ ಮಾರಾಟ ಮಾಡುತ್ತಿರುವುದನ್ನು ಆರೋಪಿಗಳು ಒಪ್ಪಿಕೊಂಡಿದ್ದಾರೆ ಎಂದರು.

ಆರೋಪಿಗಳಿಗೆ ನಿಷೇಧಿತ ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದ ಅಪರಿಚಿತ ವ್ಯಕ್ತಿಗಳ ಪತ್ತೆ ಕಾರ್ಯ ಮುಂದುವರೆದಿದ್ದು, ಪ್ರಕರಣಗಳ ತನಿಖೆ ಪ್ರಗತಿಯಲ್ಲಿರುತ್ತವೆ. ಈ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಎಂಟು ಆರೋಪಿಗಳನ್ನು ವಿವಿಧ ದಿನಾಂಕಗಳಂದು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು ಅವರನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ.
ಡಿಸಿಪಿಗಳಾದ ನಾರಾಯಣ್,ಜಿ.ಕೆ.ಮಿಥುನ್ ಕುಮಾರ್, ಮೊಹಮ್ಮದ್ ಸುಜೀತ, ಡಾ:ವಿಕ್ರಮ್ ಆಮಟೆ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ಕೈಗೊಳ್ಳಲಾಗಿತ್ತು ಎಂದು ಹೇಳಿದರು.

# 371(ಜೆ); ರಾಜಕೀಯ ಲಾಭಕ್ಕಾಗಿ ಬಳಸುವುದು ನಿಲ್ಲಲಿ: ಗೌತಮ ವೈಜನಾಥ್ ಪಾಟೀಲ



**ಚಿಂಚೋಳಿ,ಏ 7:** ಕಲ್ಯಾಣ ಕರ್ನಾಟಕದ ಜನರು ಉತ್ತಮ ನಾಯಕತ್ವ, ಪಾರದರ್ಶಕ ಆಡಳಿತ ಮತ್ತು ಸಂವಿಧಾನಾತ್ಮಕ ಹಕ್ಕುಗಳ ಸರಿಯಾದ ಜಾರಿಗೆ ಅರ್ಹರಾಗಿದ್ದಾರೆ 371(ಜೆ) ಯನ್ನು ರಾಜಕೀಯ ಲಾಭಕ್ಕಾಗಿ ಬಳಸುವುದನ್ನು ನಿಲ್ಲಿಸುವ ಸಮಯ ಬಂದಿದೆ. ನಿಜವಾದ ಹೋರಾಟಗಾರರನ್ನು ಗುರುತಿಸಿ, ಅವರ ಪರಂಪರೆಯನ್ನು ಗೌರವಿಸಿ, ಜನರಿಗೆ ನೀಡಿದ ವಾಗ್ದಾನಗಳನ್ನು ನೆರವೇರಿಸುವುದು ಅಗತ್ಯವಾಗಿದೆ ಅದರ ತನಕ, ಅಭಿವೃದ್ಧಿಯಾದ ಮತ್ತು ಶಕ್ತಿಶಾಲಿಯಾದ ಕಲ್ಯಾಣ ಕರ್ನಾಟಕದ ಕನಸು ಅಪೂರ್ಣವಾಗಿಯೇ ಉಳಿಯುತ್ತದೆ ಎಂದು ಡಿಸಿಸಿ ಬ್ಯಾಂಕ್ ನಿರ್ದೇಶಕ ಗೌತಮ ವೈಜನಾಥ್ ಪಾಟೀಲ, ಅವರು ತಿಳಿಸಿದ್ದಾರೆ
ಕಲ್ಯಾಣ ಕರ್ನಾಟಕ ಪ್ರದೇಶದ ದೀರ್ಘಕಾಲದ ನಿರ್ಲಕ್ಷ್ಯವನ್ನು ಸರಿಪಡಿಸಲು ಆರ್ಟಿಕಲ್ 371(ಜೆ) ಒಂದು ಐತಿಹಾಸಿಕ ಕ್ರಮವಾಗಿ ಜಾರಿಗೊಂಡಿತು ಈ ವಿಧಾನದ ಮೂಲಕ ಸಮಾನ ಅಭಿವೃದ್ಧಿ, ಶಿಕ್ಷಣ ಮತ್ತು ಉದ್ಯೋಗದಲ್ಲಿ ನ್ಯಾಯಯುತ ಅವಕಾಶಗಳು, ಹಾಗೂ ಜನರಿಗೆ ಗೌರವಯುತ ಬದುಕಿನ ಮಾರ್ಗ ಒದಗಿಸುವ ಉದ್ದೇಶವಿತ್ತು. ಆದರೆ, ಜಾರಿಗೆ ಬಂದ ಹಲವು ವರ್ಷಗಳ ನಂತರವೂ ನಿಜವಾದ ಸ್ಥಿತಿ ಸಂಪೂರ್ಣವಾಗಿ ವಿಭಿನ್ನವಾಗಿದೆ ಅಸಮಾನತೆ, ಅಪೂರ್ಣ ವಾಗ್ದಾನಗಳು ಮತ್ತು ರಾಜಕೀಯ ಪ್ರಯೋಜನಪರತೆ ಇನ್ನೂ ಮುಂದುವರಿದಿವೆ.
ಸಂವಿಧಾನಾತ್ಮಕ ರಕ್ಷಣೆಗಳಿದ್ದರೂ, ಕಲ್ಯಾಣ ಕರ್ನಾಟಕ ಮೂಲಭೂತ ಸೌಕರ್ಯಗಳು, ಶಿಕ್ಷಣ, ಉದ್ಯೋಗಾವಕಾಶಗಳು ಮತ್ತು ಆಡಳಿತಾತ್ಮಕ ಪ್ರತಿನಿಧಿತ್ವದಲ್ಲಿ ಇನ್ನೂ ಹಿಂದುಳಿದಿದೆ. 371(ಜೆ) ಯ ಉದ್ದೇಶವೇ ಈ ಅಂತರವನ್ನು ಕಡಿಮೆ ಮಾಡುವುದಾಗಿತ್ತು. ಆದರೆ ಸರ್ಕಾರದ ನೇಮಕಾತಿಗಳು, ಬಡ್ತಿಗಳು ಮತ್ತು ಅಭಿವೃದ್ಧಿ ಹಂಚಿಕೆಯಲ್ಲಿ ಅಸಮತೋಲನ ಸ್ಪಷ್ಟವಾಗಿ ಕಾಣಿಸುತ್ತಿದೆ.
ಪ್ರತಿ ಸರ್ಕಾರವೂ ಈ ಪ್ರದೇಶದ ಅಭಿವೃದ್ಧಿಗಾಗಿ ಸಾವಿರಾರು ಕೋಟಿ ರೂಪಾಯಿಗಳ ಅನುದಾನ ಘೋಷಿಸುತ್ತದೆ. ಆದರೆ ಆ ಹಣವನ್ನು ಅರ್ಥಪೂರ್ಣವಾಗಿ ಬಳಸಲು ನಮ್ಮ ನಾಯಕರು ವಿಫಲರಾಗಿರುವುದು ನಿಜಕ್ಕೂ ನಾಚಿಕೆಯ ಸಂಗತಿ. ಸಮಸ್ಯೆ ಈಗ ಅನುದಾನದಲ್ಲಿಲ್ಲ ಜವಾಬ್ದಾರಿತ್ವದಲ್ಲಿ ಇದೆ. ಆ ಹಣ ಎಲ್ಲಿಗೆ ಹೋಗುತ್ತಿದೆ? ನೆಲಮಟ್ಟದಲ್ಲಿ ಅದರ ಫಲಿತಾಂಶ ಏಕೆ ಕಾಣಿಸುತ್ತಿಲ್ಲ? ಸಮರ್ಪಕ ಯೋಜನೆ, ಜಾರಿಗೆ ತರಿಕೆ ಮತ್ತು ಮೇಲ್ವಿಚಾರಣೆ ಇಲ್ಲದ ಕಾರಣ, ಇದು ಒಂದು ದೊಡ್ಡ ಅವಕಾಶವಾಗಬೇಕಾದದ್ದು ಕೇವಲ ಅಪೂರ್ಣ ವಾಗ್ದಾನವಾಗಿ ಉಳಿದಿದೆ.
ಇದರಿಗಿಂತ ದುಃಖಕರವಾದ ಸಂಗತಿ ಎಂದರೆ, ಕೆಲವು ನಾಯಕರು 371(ಜೆ) ಜಾರಿಗೆ ತಮ್ಮದೇ ಕ್ರೆಡಿಟ್ ಪಡೆಯಲು ಪ್ರಯತ್ನಿಸುತ್ತಿದ್ದಾರೆ. ಇತಿಹಾಸವನ್ನು ತಮ್ಮ ಅನುಕೂಲಕ್ಕೆ ತಕ್ಕಂತೆ ಬದಲಾಯಿಸಲು ಸಾಧ್ಯವಿಲ್ಲ. ಈ ಹೋರಾಟ ರಾಜಕೀಯ ದಾನದಿಂದ ಬಂದದ್ದಲ್ಲಇದು ನಿಷ್ಠೆ, ತ್ಯಾಗ ಮತ್ತು ನ್ಯಾಯಕ್ಕಾಗಿ ಹೋರಾಡಿದವರ ಸಂಕಲ್ಪದ ಫಲವಾಗಿದೆ ಹಾಗೂ 371(ಜೆ) ಯ ಕಲ್ಪನೆ, ಹೋರಾಟ ಮತ್ತು ತ್ಯಾಗವು ನನ್ನ ತಂದೆ ಸ್ವರ್ಗೀಯ ವೈಜನಾಥ ಪಾಟೀಲ್ ಅವರಂತಹ ದೃಢಸಂಕಲ್ಪದ ನಾಯಕರಿಂದ ಸಾಧ್ಯವಾಯಿತು ಎಂಬುದನ್ನು ನೆನಪಿಸಿಕೊಳ್ಳುವುದು ಅತ್ಯಂತ ಮುಖ್ಯ. ಇಂದಿನ ಹಲವಾರು ನಾಯಕರು ಈ ವಿಚಾರವನ್ನು ವಿರೋಧಿಸುತ್ತಿದ್ದಾಗಲೂ, ಅವರು ನಿರಂತರವಾಗಿ ಕಲ್ಯಾಣ ಕರ್ನಾಟಕದ ಹಕ್ಕುಗಳಿಗಾಗಿ ಹೋರಾಡಿದರು. ಅವರ ಕೊಡುಗೆ ರಾಜಕೀಯವಷ್ಟೇ ಅಲ್ಲಇದು ಇತಿಹಾಸದಲ್ಲಿ ಅಚ್ಚಳಿಯದ ಗುರುತು.
ಇಂದು, ಇದೇ ತತ್ವವನ್ನು ವಿರೋಧಿಸಿದ್ದವರು ಅದರ ಯಶಸ್ಸಿನ ಕ್ರೆಡಿಟ್ ಪಡೆಯಲು ಮುಂದಾಗಿರುವುದು ಅತ್ಯಂತ ವಿಷಾದನೀಯ. ಇದು ಸತ್ಯವನ್ನು ಮಾತ್ರವಲ್ಲ, ಈ ಹೋರಾಟಕ್ಕಾಗಿ ತ್ಯಾಗ ಮಾಡಿದವರ ಗೌರವವನ್ನೂ ಅವಮಾನಿಸುತ್ತದೆ ಇದರ ಜೊತೆಗೆಆರ್ಟಿಕಲ್ 371(ಜೆ) ಯ ಪೂರ್ಣ ಮತ್ತು ಪ್ರಾಮಾಣಿಕ ಜಾರಿಗೆ ಸರ್ಕಾರಗಳು ವಿಫಲವಾಗಿರುವುದು ಮತ್ತಷ್ಟು ಚಿಂತಾಜನಕವಾಗಿದೆ. ನೀತಿಗಳು ಕಾಗದದಲ್ಲಿವೆ, ಆದರೆ ಅವುಗಳ ಅನುಷ್ಠಾನ ದುರ್ಬಲವಾಗಿದೆ. ಜವಾಬ್ದಾರಿತ್ವದ ಕೊರತೆಯಿಂದ ಅಸಮಾನತೆ ಮುಂದುವರಿದಿದೆ ಮತ್ತು ಜನರು ಇನ್ನೂ ತಮ್ಮ ಹಕ್ಕುಗಳಿಗಾಗಿ ಕಾಯುತ್ತಿದ್ದಾರೆ ಇದು ಕೇವಲ ನೀತಿ ವೈಫಲ್ಯವಲ್ಲಇದು ನೈತಿಕ ವೈಫಲ್ಯ ಎಂದಿದ್ದಾರೆ

# ಹುಮನಾಬಾದ ಕಾರ್ಖಾನೆಗಳಲ್ಲಿ ಕಾರ್ಮಿಕರ ಶೋಷಣೆ ಆರೋಪ : ಕ್ರಮಕ್ಕೆ ಮನವಿ



**ಬೀದರ :ಏ.7:**ಜಿಲ್ಲೆಯ ಹುಮನಾಬಾದ ಪಟ್ಟಣದ ವಿವಿಧ ಕಾರ್ಖಾನೆಗಳಲ್ಲಿ ಕಾರ್ಮಿಕರಿಗೆ ಕನಿಷ್ಠ ವೇತನ ಹಾಗೂ ಸರ್ಕಾರದ ಸೌಲಭ್ಯಗಳನ್ನು ನೀಡಲಾಗುತ್ತಿಲ್ಲ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ. ಈ ಕುರಿತು ಸಂಬಂಧಪಟ್ಟ ಕಾರ್ಖಾನೆ ಮಾಲೀಕರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಲಾಗಿದೆ.

ಕರ್ನಾಟಕ ರಾಜ್ಯ ಕಾರ್ಮಿಕ ಪಡೆ ಕಲ್ಯಾಣ ಕರ್ನಾಟಕ ವಿಭಾಗದ ವತಿಯಿಂದ ಸಲ್ಲಿಸಲಾದ ಮನವಿಯಲ್ಲಿ, ಕಾರ್ಖಾನೆಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ನಿಯಮಾನುಸಾರ ಕನಿಷ್ಠ ವೇತನ ಪಾವತಿಸದೆ, ಗುತ್ತಿಗೆದಾರರ ಮೂಲಕ ನೇಮಕಾತಿ ಮಾಡಲಾಗುತ್ತಿದೆ ಎಂದು ಆರೋಪಿಸಲಾಗಿದೆ. ಅಲ್ಲದೆ, 8 ಗಂಟೆಗಳ ಕೆಲಸದ ಅವಧಿ ಇದ್ದರೂ, ಕಾರ್ಮಿಕರಿಂದ 12 ಗಂಟೆಗಳವರೆಗೆ ಕೆಲಸ ಮಾಡಿಸಿಕೊಳ್ಳಲಾಗುತ್ತಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಇದರ ಜೊತೆಗೆ, ಸ್ಥಳೀಯ ಕಾರ್ಮಿಕರಿಗೆ ಅವಕಾಶ ನೀಡದೆ ಹೊರರಾಜ್ಯಗಳಿಂದ ಕಾರ್ಮಿಕರನ್ನು ಕರೆತರಲಾಗುತ್ತಿದೆ ಎಂಬುದೂ ಆರೋಪವಾಗಿದೆ. ಇದರಿಂದ ಸ್ಥಳೀಯರಿಗೆ ಅನ್ಯಾಯವಾಗುತ್ತಿದೆ ಎಂದು ಸಂಘಟನೆ ತಿಳಿಸಿದೆ.

ಆದ್ದರಿಂದ, ಹುಮನಾಬಾದ ಪಟ್ಟಣದ ಹೊರವಲಯದಲ್ಲಿರುವ ಕಾರ್ಖಾನೆಗಳ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಬೇಕು ಹಾಗೂ ಸ್ಥಳೀಯ ಕಾರ್ಮಿಕರಿಗೆ ಉದ್ಯೋಗಾವಕಾಶ ಕಲ್ಪಿಸಲು ಅಧಿಕಾರಿಗಳು ಮುಂದಾಗಬೇಕು ಎಂದು ಮನವಿಯಲ್ಲಿ ಒತ್ತಾಯಿಸಿ ಇಂದು ಕರ್ನಾಟಕ ರಾಜ್ಯ ಕಾರ್ಮಿಕ ಪಡೆ ಕಲ್ಯಾಣ ಕರ್ನಾಟಕ ವಿಭಾಗದ ಅಧ್ಯಕ್ಷರಾದ ಸೋಮನಾಥ ಎಂ. ಪಾಂಚಾಳ ಅವರು ಜಿಲ್ಲಾ ಕಾರ್ಮಿಕರು ಅಧಿಕಾರಿಗಳಿಗೆ ಸಲ್ಲಿಸಿದ್ದಾರೆ

# ಗ್ಯಾಸ್ ಸಿಲಿಂಡರ್, ಜೀವ ರಕ್ಷಕ ಔಷಧಿಗಳ ಬೆಲೆ ಏರಿಕೆಗೆ ಎಸ್‌ಯುಸಿಐ ತೀವ್ರ ವಿರೋದ

**ಕಲಬುರಗಿ,ಏ.6–**ವಾಣಿಜ್ಯ ಬಳಕೆಯ ಅಡುಗೆ ಅನಿಲ ಮತ್ತು ಜೀವ ರಕ್ಷಕ ಔಷಧಿಗಳ ಬೆಲೆಯನ್ನು ಹೆಚ್ಚಿಸುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಸೋಷಿಯಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಎಸ್‌ಯುಸಿಐ) (ಕಮ್ಯುನಿಸ್ಟ್) ಪಕ್ಷದ ವಾಡಿ ಸ್ಥಳೀಯ ಕಾರ್ಯದರ್ಶಿ ಶರಣು ಹೇರೂರ್ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.
“ಕೇಂದ್ರದ ಬಿಜೆಪಿ ಸರ್ಕಾರವು ಅಗತ್ಯ ವಸ್ತುಗಳ ನಿರಂತರ ಬೆಲೆ ಏರಿಕೆಯಿಂದ ದೇಶದ ಜನರನ್ನು ರಕ್ಷಿಸುವ ಬದಲು, 19 ಕೆಜಿ ತೂಕದ ವಾಣಿಜ್ಯ ಬಳಕೆಯ ಗ್ಯಾಸ್ ಸಿಲಿಂಡರ್ ಬೆಲೆಯನ್ನು ಕೇವಲ 25 ದಿನಗಳ ಅಂತರದಲ್ಲಿ ಮತ್ತೆ 218 ರೂಪಾಯಿಗಳಷ್ಟು ಹೆಚ್ಚಿಸಿದೆ. ಏಪ್ರಿಲ್ 1 ರಿಂದ ಇದರ ಮಾರುಕಟ್ಟೆ ಬೆಲೆ 2208 ರೂಪಾಯಿ ಆಗಿದೆ. ಇದಕ್ಕೂ ಮುನ್ನ, ಕೇವಲ 25 ದಿನಗಳ ಹಿಂದೆಯಷ್ಟೇ ಬಿಜೆಪಿ ಸರ್ಕಾರವು ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು 60 ರೂಪಾಯಿ ಹಾಗೂ ವಾಣಿಜ್ಯ ಸಿಲಿಂಡರ್ ಬೆಲೆಯನ್ನು 114.50 ರೂಪಾಯಿಗಳಷ್ಟು ಹೆಚ್ಚಿಸಿತ್ತು. ಇವೆಲ್ಲದರ ಜೊತೆಗೆ, ಸರ್ಕಾರವು ಸುಮಾರು 700 ರಿಂದ 900 ಔಷಧಿಗಳ ಬೆಲೆಯನ್ನೂ ಹೆಚ್ಚಿಸಿದೆ, ಇದು ಸಂಕಷ್ಟದಲ್ಲಿರುವ ಜನರಿಗೆ ದೊಡ್ಡ ಹೊಡೆತ ನೀಡಲಿದೆ. ಬಹುತೇಕ ಎಲ್ಲಾ ಜೀವನಾವಶ್ಯಕ ವಸ್ತುಗಳ ಬೆಲೆ ಏರಿಕೆಯ ಹೊರೆಯಿಂದ ಸಾಮಾನ್ಯ ಜನರು ತತ್ತರಿಸುತ್ತಿರುವಾಗ, ಈ ಹೆಚ್ಚಳವು ಅವರನ್ನು ಮತ್ತಷ್ಟು ಸಂಕಷ್ಟಕ್ಕೆ ದೂಡಲಿದೆ. ಇದು ಬಿಜೆಪಿ ಸರ್ಕಾರದ ಜನವಿರೋಧಿ ಗುಣವನ್ನು ಮತ್ತೊಮ್ಮೆ ಬಯಲಿಗೆಳೆದಿದೆ. ಈ ಬೆಲೆ ಏರಿಕೆಯನ್ನು ಹಿಂಪಡೆಯುವಂತೆ ಅವರು ಆಗ್ರಹಿಸಿದ್ದಾರೆ.

# ಎನ್ ಎಸ್ ಎಸ್ ಶಿಬಿರಗಳು ಶಿಸ್ತು ಕಲಿಸುತ್ತವೆ: ಪ್ರಕಾಶ ಜಮಾದಾರ

**ಅಫಜಲಪುರ:** ಕಾಲೇಜು ಹಂತದಲ್ಲಿ ವಿದ್ಯಾರ್ಥಿಗಳು ಬರೀ ಪಠ್ಯಕ್ಕೆ ಸೀಮಿತವಾಗದೆ ಪಠ್ಯೇತರ ಚಟುವಟಿಕೆಗಳಲ್ಲೂ ಆಸಕ್ತಿ ವಹಿಸಬೇಕು ಅಂದಾಗ ಮಾತ್ರ ಶಿಸ್ತು, ಸಮಯ ಪಾಲನೆ, ಮತ್ತು ಸೇವಾ ಮನೋಭಾವ ಬೆಳೆಸಿಕೊಳ್ಳಲು ಸಾಧ್ಯವಾಗಲಿದೆ ಎಂದು ಕಾಲೇಜು ಅಭಿವೃದ್ದಿ ಸಮಿತಿ ಉಪಾಧ್ಯಕ್ಷರಾದ ಪ್ರಕಾಶ ಜಮಾದಾರ ಹೇಳಿದರು.

ತಾಲೂಕಿನ ಆನೂರ ಗ್ರಾಮದ ಚಂದ್ರಗಿರಿ ದೇವಸ್ಥಾನದಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದ ವತಿಯಿಂದ 7 ದಿನಗಳ ಕಾಲ ನಡೆಯುವ ಎನ್‌ಎಸ್‌ಎಸ್ ಶಿಬಿರ ಉದ್ಘಾಟಿಸಿ ಮಾತನಾಡುತ್ತಾ ಕಾಲೇಜು ಕೋಣೆಗಳಲ್ಲಿ ನಿಮಗೆ ಪುಸ್ತಕದ ಪಾಠ ಬೋಧನೆಯಾದರೆ, ಶಿಬಿರದಲ್ಲಿ ನಿಜವಾದ ಸಮಾಜ ವ್ಯವಸ್ಥೆಯ ಪರಿಚಯವಾಗಲಿದೆ. ಹೀಗಾಗಿ ಈ ಅನುಭವವನ್ನು ವಿದ್ಯಾರ್ಥಿಗಳು ಅನುಭವಿಸಬೇಕಾದರೆ ಶಿಬಿರದಲ್ಲಿ ಕಡ್ಡಾಯವಾಗಿ ಭಾಗಿಯಾಗಬೇಕು.

ಇಲ್ಲಿ ಸಿಗುವ ಅನುಭವಗಳೇ ನಾಳೆ ನಿಮ್ಮ ಬದುಕನ್ನು ಪರಿಪೂರ್ಣಗೊಳಿಸಲಿವೆ ಎಂದರು.ಮಾಜಿ ಗ್ರಾಪಂ ಅಧ್ಯಕ್ಷ ದತ್ತು ಘಾಣೂರ ಮಾತನಾಡಿ, ನಮ್ಮ ಊರಿನಲ್ಲಿ ಎನ್‌ಎಸ್‌ಎಸ್ ಶಿಬಿರ ನಡೆಯುತ್ತಿರುವುದು ನಮಗೆಲ್ಲ ಖುಷಿ ತಂದಿದೆ.ಎಲ್ಲರೂ ಸೇರಿ ಶಿಬಿರವನ್ನು ಯಶಸ್ವಿಗೊಳಿಸುತ್ತೇವೆ ಎಂದರು.ಪ್ರಾಚಾರ್ಯ ಡಾ.ಸಂತೋಷ ಹುಗ್ಗಿ ಮಾತನಾಡುತ್ತಾ ಎನ್‌ಎಸ್‌ಎಸ್ ಶಿಬಿರದಲ್ಲಿ ಭಾಗಿಯಾದ ವಿದ್ಯಾರ್ಥಿಗಳು ಶಿಬಿರದ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು, ಒಂದು ವಾರ ಗ್ರಾಮದಲ್ಲಿ ಶ್ರದ್ದೆಯಿಂದ ಅಗತ್ಯ ಕೆಲಸಗಳನ್ನು ಮಾಡುವ ಮೂಲಕ ಶಿಬಿರವನ್ನು ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು. ಚಂದ್ರಗಿರಿ ದೇವಸ್ಥಾನದ ಅರ್ಚಕ ರಾಹುಲ್ ಭಂಡಾರಿ ಸಾನಿಧ್ಯ ವಹಿಸಿದ್ದರು.

ಈ ಸಂಧರ್ಭದಲ್ಲಿ ಯುವ ಮುಖಂಡ ಚಂದ್ರಕಾಂತ ಸೀತನೂರ, ಹಿರಿಯ ಪ್ರಾಧ್ಯಪಕಿ ಎಂ.ಎಸ್ ರಾಜೇಶ್ವರಿ, ಶಿಭಿರಾಧಿಕಾರಿ ಡಾ.ಶಾಂತಲಾ, ಡಾ.ರಾಘವೇಂದ್ರ, ಡಾ.ಸೂರ್ಯಕಾಂತ ಉಮ್ಮಾಪುರೆ, ಡಾ.ಮಹ್ಮದ್ ಯುನುಷ್, ಡಾ.ವಿನಾಯಕ,



ಪ್ರವೀಣ ಸೇಡಂಕರ್, ಡಾ.ಹೀರು ರಾಠೋಡ, ಡಾ.ಕವಿತಾ ರಾಠೋಡ, ಡಾ.ತಾಯಪ್ಪ, , ಡಾ. ಡಾ. ಅಂಬಿಕಾ, ಡಾ. ಸಪನಾ, ಶರಣಬಸವೇಶ್ವರ ಡಾ.ಸಂತೋಷ ಬಡೀಗೇರ, ಡಾ. ಗೌರಿಶಂಕರ ಡಾ.ಗಿರೀಜಾ, ಡಾ ಶಿವಕುಮಾರ, ಡಾ. ಮಮತಾ ಹಾಗೂ ವಿದ್ಯಾರ್ಥಿಗಳು ಗ್ರಾಮಸ್ಥರು ಇದ್ದರು. ಕಾರ್ಯಕ್ರಮ ಡಾ.ಸಾವಿತ್ರ ಕೃಷ್ಣ ನಿರೂಪಿಸಿದರು. ಡಾ.ದತ್ತಾತ್ರೇಯ ಸಿಹೆಚ್ ಸ್ವಾಗತಿಸಿದರು. ಡಾ.ಸಂಗಣ್ಣ ಸಿಂಗೆ ವಂದಿಸಿದರು.

ಸರ್ಕಾರ ಶಿಕ್ಷಣ ಕ್ಷೇತ್ರಕ್ಕೆ ಸಾಕಷ್ಟು ಅನುದಾನ ಮೀಸಲಿಡುತ್ತಿದೆ, ನಮ್ಮ ಶಾಸಕರು ಕೂಡ ಶಿಕ್ಷಣ ಪ್ರೇಮಿಗಳಾಗಿದ್ದು ಪ್ರಾಥಮಿಕದಿಂದ ಪದವಿ ಶಿಕ್ಷಣದ ವರೆಗೆ ಎಲ್ಲಾ ವಿಭಾಗಗಳಲ್ಲೂ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿದ್ದಾರೆ. ಇನ್ನೂ ಏನಾದರೂ ಬೇಕಿದ್ದರೆ ಗಮನಕ್ಕೆ ತಂದರೆ ಶಾಸಕರ ಗಮನಕ್ಕೆ ತಂದು ಸೌಲಭ್ಯಗಳನ್ನು ಕಲ್ಪಿಸಲಾಗುತ್ತದೆ.
ಸಿದ್ಧಾರ್ಥ ಬಸರಿಗಿಡ
ಮಾಜಿ ಜಿ.ಪಂ.ಸದಸ್ಯರು (ಬಡದಾಳ),ಅಫಜಲಪುರ

# ಕಲಾವಿದರನ್ನು ಸಲಹುವ ಹಾರಕೂಡ ಶ್ರೀ ಮಠ: ಸಿದ್ದಬಸವ ಕಬೀರ ಸ್ವಾಮಿಗಳು

**ಬೀದರ್:ಏ.7:** ಸೂಕ್ತ ಹಾಗೂ ಶ್ರೇಷ್ಠ ಅವಕಾಶಗಳನ್ನು ಕಲ್ಪಿಸಿಕೊಡುವ ಮೂಲಕ ಕವಿ, ಕಲಾವಿದ, ಸಾಹಿತಿಗಳಿಗೆ ಸಲಹುವಂತಹ ಶ್ರೇಷ್ಠ ಕಾರ್ಯ ಹಾರಕೂಡ ಶ್ರೀಮಠದಿಂದ ಸಾಗಿ ಬರುತ್ತಿದೆ ಎಂದು ಸಿದ್ದಬಸವ ಕಬೀರ ಸ್ವಾಮಿಗಳು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಸೋಮವಾರ ಬೆಳಗ್ಗೆ ಆಯೋಜಿಸಿದ ಧಾರ್ಮಿಕ ಸಭೆಯ ನೇತೃತ್ವ ವಹಿಸಿ ಮಾತನಾಡಿದ ಸ್ವಾಮಿಗಳು, ಹಾರಕೂಡ ಮಠವೆಂದರೆ ಇದೊಂದು ಅಭಿನವ ಅನುಭವ ಮಂಟಪವಾಗಿದ್ದು, ಇಲ್ಲಿ ಸರ್ವಜಾತಿ ಜನಾಂಗದ, ಸರ್ವಧರ್ಮಗಳ ಬೆಸುಗೆಯ ಸುಂದರ ಸೌಹಾರ್ದ ಆಚಾರ ವಿಚಾರ ತಾಣ ಸಿಗುತ್ತದೆ.

ಪೂಜ್ಯ ಡಾ. ಚನ್ನವೀರ ಶಿವಾಚಾರ್ಯರು, ಬಸವಣ್ಣನವರನ್ನು, ಬಸವಾದಿ ಶರಣರನ್ನು ತಮ್ಮ ಅಂತರಂಗದಲ್ಲಿ ಇರಿಸಿಕೊಂಡು ಬಸವ ಚಿಂತನೆಯನ್ನು ಸಮಾಜಕ್ಕೆ ಪ್ರಖರವಾಗಿ ಮುಟ್ಟಿಸುವ ಆದರ್ಶ ಶಿವಾಚಾರ್ಯರಾಗಿದ್ದಾರೆ.

ಇಂತಹ ಮಹಾನ್ ಯತಿವರ್ಯರನ್ನು ಪಡೆದ ಈ ನೆಲವೇ ಧನ್ಯ.

ಹಾರಕೂಡ ಮಠದ ಭೇಟಿ ಹಾಗೂ ಚನ್ನವೀರ ಶಿವಾಚಾರ್ಯರ ದರ್ಶನಾಶೀರ್ವಾದದಿಂದ ನನ್ನಲ್ಲಿ ಹೊಸ ಆಧ್ಯಾತ್ಮಿಕ ಚೈತನ್ಯ ಮೂಡಿದೆ ಎಂದು ಹರ್ಷದಿಂದ ನುಡಿದರು.

ಹಾರಕೂಡ ಶ್ರೀ ಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸಾನಿಧ್ಯ ವಹಿಸಿದ್ದರು.

ಬಸವಕಲ್ಯಾಣ ದೇವಸ್ಥಾನ ಪಂಚಕಮಿಟಿ (ಬಿಡಿಪಿಸಿ) ಆಡಳಿತ ಮಂಡಳಿಯ ಅಧ್ಯಕ್ಷರಾದ ಶ್ರೀ ಅನೀಲಕುಮಾರ ವೈಜಿನಾಥಪ್ಪಾ



ರಗಟೆ, ಉಪಾಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಶಾಂತಪ್ಪಾ ಕುರಕೋಟೆ, ಕೋಶಾಧ್ಯಕ್ಷರಾದ ಶ್ರೀ ಜಗನ್ನಾಥ ಚನ್ನಬಸಪ್ಪಾ ಖೂಬಾ, ಕಾರ್ಯದರ್ಶಿಗಳಾದ ಶ್ರೀ ಅಶೋಕ ರಾಮಶೆಟ್ಟೆಪ್ಪಾ ನಾಗರಾಳೆ, ಎಪಿಎಂಸಿ ಮಾಜಿ ಅಧ್ಯಕ್ಷರಾದ ಸಿದ್ರಾಮಪ್ಪ ಗುದಗೆ, ಬಿಡಿಪಿಸಿ ಸಹಕಾರದರ್ಶಿಗಳಾದ ಶ್ರೀ ಬಸವರಾಜ ಕಾಶಪ್ಪಾ ಬಾಲಕೀಲೆ, ಶ್ರೀ ಸುನೀಲ ಶಿವಶರಣಪ್ಪಾ ರಾಯವಾಡೆ ನಿರ್ದೇಶಕರುಗಳಾದ ಶ್ರೀ ಬಸವರಾಜ ಭೋಜಪ್ಪಾ ಕೋರಕೆ, ಶ್ರೀ ಇರಣ್ಣಾ ನಾಗಣ್ಣಾ ಹಲಶೆಟ್ಟೆ, ಶ್ರೀ ಭದ್ರಿನಾಥ ಶಿವರಾಜ ಪಾಟೀಲ, ಶ್ರೀ ವಿವೇಕಾನಂದ ವೈಜಪ್ಪಾ ಹೊದಲೂರೆ, ಶ್ರೀ ಬಸವರಾಜ ವೈಜಿನಾಥಪ್ಪಾ ತೊಂಡಾರೆ, ಶ್ರೀ ಮಲ್ಲಿಕಾರ್ಜುನ ಚನ್ನಪ್ಪಾ ಚಿರಡೆ, ಶ್ರೀ ಸುನೀಲಕುಮಾರ ಸುಭಾಷ ಹೊಳಕುಂದೆ, ಶ್ರೀ ರಾಜಕುಮಾರ ಗದಗೇಪ್ಪಾ ಹೊಳಕುಂದೆ ಹಾಗೂ ಶ್ರೀಮತಿ ಪುಷ್ಪಾವತಿ ರಾಜಕುಮಾರ ಮಾಮಾ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಚಿಗರಹಳ್ಳಿ ಸಿದ್ದಬಸವ ಕಬೀರ ಸ್ವಾಮಿಗಳಿಗೆ ಹಾಗೂ ಬಿಡಿಪಿಸಿ ನೂತನ ಪದಾಧಿಕಾರಿಗಳಿಗೆ ಹಾರಕೂಡ ಶ್ರೀ ಮಠದ ವತಿಯಿಂದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ ಗೌರವಿಸಿದರು.

ಮಲ್ಲಿನಾಥ ಹಿರೇಮಠ ಸ್ವಾಗತಿಸಿದರು. ಕಾರ್ತಿಕ ಸ್ವಾಮಿ ಯಲದಗುಂಡಿ, ಶರಣಪ್ಪ ಜಮಾದಾರ ಸಂಗೀತ ಸೇವೆ ಸಲ್ಲಿಸಿದರು. ಭಕ್ತ ಕುಂಬಾರ ಕಾರ್ಯಕ್ರಮ ನಿರೂಪಣೆ ಮಾಡಿದರು.

ಚಿತ್ರ : ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಸೋಮವಾರ ಬೆಳಗ್ಗೆ ಆಯೋಜಿಸಿದ ಧಾರ್ಮಿಕ ಸಭೆಯನ್ನು ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಜ್ಯೋತಿ ಬೆಳಗಿಸಿ ಉದ್ಘಾಟನೆ ಮಾಡಿದರು.

ಚಿಗರಹಳ್ಳಿಯ ಸಿದ್ದಬಸವ ಕಬೀರ ಸ್ವಾಮಿಗಳು, ಬಸವಕಲ್ಯಾಣ ದೇವಸ್ಥಾನ ಪಂಚಕಮಿಟಿ (ಬಿಡಿಪಿಸಿ) ಆಡಳಿತ ಮಂಡಳಿಯ ಅಧ್ಯಕ್ಷರಾದ ಶ್ರೀ ಅನೀಲಕುಮಾರ ವೈಜಿನಾಥಪ್ಪಾ ರಗಟೆ, ಉಪಾಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಶಾಂತಪ್ಪಾ ಕುರಕೋಟೆ, ಕೋಶಾಧ್ಯಕ್ಷರಾದ ಶ್ರೀ ಜಗನ್ನಾಥ ಚನ್ನಬಸಪ್ಪಾ ಖೂಬಾ, ಕಾರ್ಯದರ್ಶಿಗಳಾದ ಶ್ರೀ ಅಶೋಕ ರಾಮಶೆಟ್ಟೆಪ್ಪಾ ನಾಗರಾಳೆ, ಎಪಿಎಂಸಿ ಮಾಜಿ ಅಧ್ಯಕ್ಷರಾದ ಸಿದ್ರಾಮಪ್ಪ ಗುದಗೆ, ಬಿಡಿಪಿಸಿ ಸಹಕಾರದರ್ಶಿಗಳಾದ ಶ್ರೀ ಬಸವರಾಜ ಕಾಶಪ್ಪಾ ಬಾಲಕೀಲೆ, ಶ್ರೀ ಸುನೀಲ ಶಿವಶರಣಪ್ಪಾ ರಾಯವಾಡೆ ನಿರ್ದೇಶಕರುಗಳಾದ ಶ್ರೀ ಬಸವರಾಜ ಭೋಜಪ್ಪಾ ಕೋರಕೆ, ಶ್ರೀ ಇರಣ್ಣಾ ನಾಗಣ್ಣಾ ಹಲಶೆಟ್ಟೆ, ಶ್ರೀ ಭದ್ರಿನಾಥ ಶಿವರಾಜ ಪಾಟೀಲ, ಶ್ರೀ ವಿವೇಕಾನಂದ ವೈಜಪ್ಪಾ ಹೊದಲೂರೆ, ಶ್ರೀ ಬಸವರಾಜ ವೈಜಿನಾಥಪ್ಪಾ ತೊಂಡಾರೆ, ಶ್ರೀ ಮಲ್ಲಿಕಾರ್ಜುನ ಚನ್ನಪ್ಪಾ ಚಿರಡೆ, ಶ್ರೀ ಸುನೀಲಕುಮಾರ ಸುಭಾಷ ಹೊಳಕುಂದೆ, ಶ್ರೀ ರಾಜಕುಮಾರ ಗದಗೇಪ್ಪಾ ಹೊಳಕುಂದೆ ಹಾಗೂ ಶ್ರೀಮತಿ ಪುಷ್ಪಾವತಿ ರಾಜಕುಮಾರ ಮಾಮಾ, ಮಲ್ಲಿನಾಥ ಹಿರೇಮಠ ಹಾರಕೂಡ ಉಪಸ್ಥಿತರಿದ್ದರು.

# ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರಲಾಗುವುದು:ಶಿವಾನಂದ ಭಜಂತ್ರಿ



**ಸೈದಾಪುರ:ಏ.7:**ರಾಯಚೂರು ಗಡಿ ಭಾಗಕ್ಕೆ ಹೊಂದಿಕೊಂಡಿರುವ ಕೃಷ್ಣಾ ಗ್ರಾಮದ ಕೃಷ್ಣ ಕನ್ನಡ ಶಾಲೆಗೆ ರಾಯಚೂರು ಜಿಲ್ಲೆಯ ಅಪಾರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ ಭೇಟಿ ನೀಡಿ ಹಳೆಯ ವಿದ್ಯಾರ್ಥಿಗಳು ಹಾಗೂ ಶಾಲೆಯಲ್ಲಿ ಅಭ್ಯಾಸ ಮಾಡುವತ್ತಿರುವ ವಿದ್ಯಾರ್ಥಿಗಳು ಸೇರಿದಂತೆ ಅಧಿಕಾರಿಗಳಿಂದ ಮಾಹಿತಿ ಪಡೆದು ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹಾರಕ್ಕೆ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಈ ಸಂರ್ಭದಲ್ಲಿ ಮಾತನಾಡಿದ ಅವರು, ಕೃಷ್ಣಾ ವರೆಗೆ ಬಸ್ ವ್ಯವಸ್ಥೆ ಕಲ್ಪಿಸಲಾಗುವುದು. ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆಯಲ್ಲಿ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಸಂಬಂಧ ಪಟ್ಟ ಅಧಿಕಾರಿಗಳೊಂದಿಗೆ ಮಾತನಾಡಿ ಸೂಕ್ತ ಪರಿಹಾರ ಆಗುವಂತೆ ನೋಡಿಕೊಳ್ಳುತ್ತೇವೆ. ಪ್ರವೇಶಕ್ಕಾಗಿ ವಲಸೆ ಪ್ರಮಾಣ ಪತ್ರ ಹಾಗೂ ಇತರೆ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಹುಡುಕಿ ವಿದ್ಯಾರ್ಥಿಗಳಿಗೆ ಸಹಕಾರ ನೀಡಲಾಗುವುದು. ಉದ್ಯೋಗದಲ್ಲಿ 5% ರಷ್ಟು ಮೀಸಲಾತಿ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳಿಗೆ ಪತ್ರದ ಮೂಲಕ ತಿಳಿಸುತ್ತೇವೆ ಎಂದು ಭರವಸೆ ನೀಡಿದರು.

ಗಡಿ ಶಾಲಾ ಮಕ್ಕಳು ಸುಮಾರು 51 ವರ್ಷಗಳಿಂದ 10ನೇ ತರಗತಿ ನಂತರ ಪ್ರವೇಶಕ್ಕಾಗಿ, ವಲಸೆ ಪ್ರಮಾಣ ಪತ್ರಕ್ಕಾಗಿ, ಹಾಸ್ಟೆಲ್, ಬಸ್‌ಪಾಸ, ಜಾತಿ ಪ್ರಮಾಣ ಪತ್ರ, ಶಿಷ್ಯವೇತನ, ಉದ್ಯೋಗಕ್ಕೆ ಸಂಬಂದ ಪಟ್ಟಂತೆ ಸಾಕಷ್ಟು ಸಮಸ್ಯೆಗಳು ಕಂಡು ಬರುತ್ತಿವೆ. ಕರ್ನಾಟಕ ಸರಕಾರ ಇದರ ಬಗಗೆ ಕಾಳಜಿ ವಹಿಸಿಬೇಕು ಎಂದು ಕೃಷ್ಣಾ ಮಂಡಲದ ವಿದ್ಯಾಧಿಕಾರಿ ನಿಜಾಮುದ್ದೀನ್, ಗಡಿನಾಡು ಕನ್ನಡದ ಅಧ್ಯಕ್ಷರು ಮತ್ತು ಗೌರವ ಅಧ್ಯಕ್ಷರಾದ ಅಮರ್ ದೀಕ್ಷಿತ್, ರಾಮಲಿಂಗಪ್ಪ ಕುನ್ನಿ ತಿಳಿಸಿದರು.

ಈ ಸಂದರ್ಭದಲ್ಲಿ ರಾಯಚೂರು ತಹಶೀಲ್ದಾರ ಸುರೇಶ್ ವರ್ಮಾ, ಡಿಡಿಪಿಯು ಸೋಮಶೇಖರಪ್ಪ ಹೊಕ್ರಾಣಿ, ಡಿಡಿಪಿಐ ರಂಗಸ್ವಾಮಿ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಪ್ರವೀಣ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಮೋನಪ್ಪ, ಜಿಲ್ಲಾ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಸುನೀತಾ, ಬಿಇಒ ಈರಣ್ಣ ಕೋಸಗಿ, ಕೃಷ್ಣಾ ಮಂಡಲದ ತಹಶೀಲ್ದಾರರು ಶ್ರೀನಿವಾಸ್, ಕೃಷ್ಣಾ ಪ್ರೌಢ ಶಾಲೆಯ ಮುಖ್ಯಗುರು ಕಿಶೋರ್ ಕುಮಾರ್, ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು, ಕೃಷ್ಣಾ ಗ್ರಾಮದ ಅಧ್ಯಕ್ಷರು ಎಸ್ ನಾಗೇಂದ್ರ ಹಾಗೂ ಶಾಲೆಯ ಹಳೆಯ ವಿದ್ಯಾರ್ಥಿಗಳು ,ಗ್ರಾಮದ ಮುಖಂಡರು ಸೇರಿದಂತೆ ಇತರರಿದ್ದರು.

ಇಲ್ಲಿನ ಅನೇಕ ಜನರು ಮತ್ತು ಮಕ್ಕಳು ಕನ್ನಡ ಕಲಿತು ಕನ್ನಡ ಉಳಿಸಿ ಬೆಳೆಸಿದರು. ಕರ್ನಾಟಕ ಸರ್ಕಾರ ಮಾತ್ರ ಇಲ್ಲಿನ ವಿದ್ಯಾರ್ಥಿಗಳಿಗೆ ಕನ್ನಡಿಗರಿಗೆ ಅನ್ಯಾಯ ಮಾಡುತ್ತಿದೆ, ಇದರಿಂದಾಗಿ ಕನ್ನಡ ಕಲಿತ ಮಕ್ಕಳು ಎದುರಿಸುತ್ತಿರುವ ಅನೇಕ ಸಮಸ್ಯೆಗಳಲ್ಲಿ ಅತಿ ಮುಖ್ಯವಾದ ಸಮಸ್ಯೆಗಳಾದ ಕಾಲೇಜು ಪ್ರವೇಶ ಹಾಗೂ ಉದ್ಯೋಗದಲ್ಲಿನ ಮೀಸಲಾತಿ ಬಗ್ಗೆ ಇರುವ ಸಮಸ್ಯೆಗಳನ್ನು ಸರ್ಕಾರ ಅತಿ ಬೇಗನೆ ಪರಿಹರಿಸುವಂತೆ ಜಿಲ್ಲಾಧಿಕಾರಿಗಳ ಕಚೇರಿಯಿಂದ ವರದಿಯನ್ನು ಸಲ್ಲಿಸಬೇಕು. ಹಳೆಯ ವಿದ್ಯಾರ್ಥಿಗಳಾದ ಬಿ. ಬೀಮ್ಸಿ, ಯೂ ಭೀಮಾಶಂಕರ ಮತ್ತು ಮಹೇಶ್ ನಾಯಕ

# ಚಿನಮಳ್ಳಿ ; ಬೇಸಿಗೆ ರಜೆಯಲ್ಲಿ “ಚೆಂಡು ಹೂವು” ಬೆಳೆದ ಅತಿಥಿ ಶಿಕ್ಷಕ ಗುರುನಾಥ ತಳಕೇರಿ

**ಅಫಜಲಪುರ ;ಏ.7:** ತಾಲ್ಲೂಕಿನ ಹಸರಗುಂಡಗಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಚಿನಮಳ್ಳಿ ಗ್ರಾಮದ ಡಿ.ಇಡ್ ಮತ್ತು ಎಂ.ಎಸ್. ಡಬ್ಲೂ ಪದವೀಧರ ಮತ್ತು ಅತಿಥಿ ಶಿಕ್ಷರಾಗಿ ಸೇವೆ ಸಲ್ಲಿಸುತ್ತಿರುವ ಗುರುನಾಥ ಭೀಮಶಾ ತಳಕೇರಿ ಅವರು ತಮ್ಮ ನೀರಾವರಿ ಹೊಂದಿರುವ ಸ್ವಂತ ಜಮೀನಿನಲ್ಲಿ ಕಬ್ಬು, ಹತ್ತಿ ಬೆಳೆಗಳನ್ನು ಬೆಳೆಯುವುದರ ಜೊತೆಗೆ ತೋಟಗಾರಿಕೆ ಬೆಳೆಯಾಗಿರುವ “ಚೆಂಡು ಹೂವು” ಬೆಳೆಯುವ ಮೂಲಕ ಇಂದಿನ ಯುವ ಪೀಳಿಗೆಗೆ ಮಾದರಿಯಾಗಿದ್ದಾರೆ.

ತಾಲ್ಲೂಕಿನಲ್ಲಿ ಭೀಮಾ ನದಿ ನೀರು ಹರಿಯುವುದರಿಂದ ಈ ಭಾಗದ ರೈತರು ತಮ್ಮ ಜಮೀನಿಗೆ ನೀರಾವರಿ ಸೌಲಭ್ಯಗಳನ್ನು ಪಡೆದುಕೊಂಡು ವಾಣಿಜ್ಯ ಬೆಳೆಗಳಾದ ಕಬ್ಬು, ಹತ್ತಿ, ಬಾಳೆ ಸೇರಿದಂತೆ ಅನೇಕ ಬೆಳೆಗಳನ್ನು ಅತಿ ಹೆಚ್ಚು ರೈತರು ಬೆಳೆಯುವುದರಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಆದರೆ, ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ಆಸಕ್ತಿ ಇತ್ತೀಚೆಗೆ ರೈತರು ಕಡಿಮೆಯಾಗುತ್ತಿದೆ. ಅತಿ ಹೆಚ್ಚು ಆದಾಯದಾಯಕ ಬೆಳೆಯಾದ ಕಬ್ಬು ಬೆಳೆಯುವವರ ಮದ್ಯ ತೋಟಗಾರಿಕೆ ಬೆಳೆಗಳು ಬೆಳೆಯುವುದರಿಂದ ಹೆಚ್ಚು ಲಾಭ ಪಡೆಯಲು ಸಾದ್ಯ.

ಪ್ರಥಮ ಬಾರಿಗೆ ಸುಮಾರು ಎರಡು ಎಕರೆ ಜಮೀನಿನಲ್ಲಿ “ಚೆಂಡು ಹೂವು” ಬೆಳೆಗೆ ಲಾಗೋಡಿ(ನಿರ್ವಹಣೆ) ರೂ.10 ಸಾವೀರ ಮಾತ್ರ ಖರ್ಚಾಗಿದೆ. ಈಗ ಬಂದಿರುವ ಫಲದಿಂದ ಸರಿ ಸುಮಾರು ನಿರ್ವಹಣೆ ಮಾಡಲು ಹಾಕಿರುವ ಹಣವನ್ನು ಮರುಪಾವತಿಯಾಗಿ ಹೆಚ್ಚು ಕಡಿಮೆ ಲಕ್ಷ ರೂ. ಹೆಚ್ಚು ಆದಾಯ ಉಳಿಯುವ ಸಾದ್ಯತೆ ಇದೆ. ತೋಟಗಾರಿಕೆ ಇಲಾಖೆಯವರು ನಾವು ಬೆಳದಿರುವ ವಿಷಯ ನಿಮ್ಮ ಪತ್ರಿಕೆಯ ಮೂಲಕ ಮಾಹಿತಿ ತಲುಪಿಸುವ ವ್ಯವಸ್ಥೆ ಮಾಡಿದರೆ, ಇಲಾಖೆಯ ವತಿಯಿಂದ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಸರಕಾರದ ವತಿಯಿಂದ ಸಹಕಾರ ಮಾಡಿದರೆ ಹೆಚ್ಚು ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಅನುಕೂಲ ಮಾಡಿಕೊಡಬೇಕು ಎಂದು ಚೆಂಡು ಹೂವು ಬೆಳೆದ ಗುರುನಾಥ ಸಂಜೆವಾಣಿ ಪ್ರತಿನಿಧಿಯೊಂದಿಗೆ ತಮ್ಮ ಮಾಹಿತಿ ಹಂಚಿಕೊಂಡರು.

ನಾನು ಡಿ.ಇಡ್. ಮತ್ತು ಎಂ.ಎಸ್.ಡಬ್ಲ್ಯೂ ಪದವೀಧರನಾಗಿದ್ದೇನೆ.



ಪ್ರಸ್ತುತ ಸ್ವಗ್ರಾಮ ಚಿನಮಳ್ಳಿ, ಹಸರಗುಂಡಗಿ ಸೇರಿದಂತೆ ಅನೇಕ ಕಡೆ ಅತಿಥಿ ಶಿಕ್ಷಕನಾಗಿ ಸೇವೆ ಸಲ್ಲಿಸಿದ್ದೇನೆ. ಬೇಸಿಗೆಯ ರಜೆಯಲ್ಲಿ ತಂದೆಗೆ ಸಹಕಾರ ಮಾಡಬೇಕೆಂದು ಜಮೀನಿನಲ್ಲಿ ಕೆಲಸ ಮಾಡುತ್ತಿದ್ದು, ನಮ್ಮ ಜಮೀನಿನಲ್ಲಿ ಕಬ್ಬು, ಹತ್ತಿ, ತೊಗರಿ, ಜೋಳ ಮತ್ತು ತೋಟಗಾರಿಕೆ ಬೆಳೆಯಾಗಿರುವ “ಚೆಂಡು ಹೂ” ಬೆಳೆ ಬೆಳೆಯುತ್ತೇವೆ. ಮುಂದಿನ ದಿನಗಳಲ್ಲಿ ತೋಟಗಾರಿಕೆ ಇಲಾಖೆಯ ವತಿಯಿಂದ ಹೆಚ್ಚು ಸಹಕಾರ ಸಿಕ್ಕರೆ ಬೇರೆ, ಬೇರೆ ಹಣ್ಣಿನ ಗಿಡ ನೆಟ್ಟು ಉತ್ತಮವಾದ ಬೆಳೆ ಬೆಳೆಯಲು ಪ್ರಯತ್ನ ಮಾಡುವೆ.

–ಗುರುನಾಥ ತಳಕೇರಿ
ಚೆಂಡು ಹೂವು ಬೆಳೆದ ಅತಿಥಿ ಶಿಕ್ಷಕ, ಚಿನಮಳ್ಳಿ.

ತಾಲ್ಲೂಕಿನ ಚಿನಮಳ್ಳಿ ಗ್ರಾಮದ ಗುರುನಾಥ ಅವರು ಬೆಳದಿರುವ “ಚೆಂಡು ಹೂವು” ಬೆಳೆ ಬಹಳ ಫಲದಿಂದ ಬೆಳೆದಿದೆ. ಮುಂದಿನ ದಿನಗಳಲ್ಲಿ ಅವರು ನಮ್ಮ ಇಲಾಖೆಯ ವತಿಯಿಂದ ಅವರಿಗೆ ಬೇಕಾಗುವ ಎಲ್ಲಾ ರೀತಿಯ ಸಹಾಕಾರ ನೀಡುವ ಮೂಲಕ ಅವರಿಗೆ ಶಕ್ತಿಯಾಗಿ ಅವರೊಂದಿಗೆ ಇರುತ್ತೇವೆ.ಯುವಕರಿಗೆ ಗುರುನಾಥ ಅವರು ಮಾರ್ಗದರ್ಶಕರಾಗಿದ್ದಾರೆ. ಸಾದ್ಯವಾದರೆ, ಚಿನಮಳ್ಳಿ ಗ್ರಾಮಕ್ಕೆ ಬೇಟಿ ಬೆಳೆದಿರುವ ಚೆಂಡು ಹೂವು ವೀಕ್ಷಣೆ ಮಾಡುವೆ.

–ಶಂಕರಗೌಡ ಪಾಟೀಲ
ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಅಫಜಲಪುರ

# ರೆಹಮಾನ್ ಪಟೇಲ್ ಅವರಿಗೆ ‘ಕಲಾ ತುರುವಂ ಪ್ರಶಸ್ತಿ’ ಪ್ರದಾನ



**ಕಲಬುರಗಿ:ಏ.7:**ಚೆನ್ನೈ ಆಧಾರಿತ ಶ್ರೀ ಧರ್ಷಿಣಿ ಕಲೈಕೂಡಂ ವತಿಯಿಂದ ಕಲಾವಿದ ಹಾಗೂ ಸಂಶೋಧಕ ರೆಹಮಾನ್ ಪಟೇಲ್ ಅವರಿಗೆ ಭಾನುವಾರ ಚೆನ್ನೈನ ಲಲಿತ ಕಲಾ ಅಕಾಡೆಮಿಯಲ್ಲಿ ‘ಕಲಾ ತುರವಂ ಪ್ರಶಸ್ತಿ’ ನೀಡಿ ಗೌರವಿಸಲಾಯಿತು. ಈ ಪ್ರಶಸ್ತಿಯೊಂದಿಗೆ ರೂ. 10,000 ನಗದು, ಪ್ರಮಾಣಪತ್ರ ಮತ್ತು ನೆನಪಿನ ಕಾಣಿಕೆ ನೀಡಲಾಗುತ್ತದೆ.

ವಿಜಿಪಿ ಗ್ರೂಪ್ ಆಫ್ ಕಂಪನೀಸ್ ಅಧ್ಯಕ್ಷ ವಿ.ಜಿ. ಸಂತೋಷಂ, ತಮಿಳು ಅಭಿವೃದ್ಧಿ ಇಲಾಖೆಯ ನಿರ್ದೇಶಕಿ ಅವ್ವೈ ಎನ್. ಅರುಲ್, ಪತ್ರಕರ್ತ ನಕ್ಕೀರನ್ ಗೋಪಾಲ್, ನಕ್ಕೀರನ್ ತಮಿಳು ಸಂಗಂ ಜಂಟಿ ಕಾರ್ಯದರ್ಶಿ ಶಕ್ತಿ ಪಿ. ಬಾಸ್ಕರನ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ವಿಜೇತರಿಗೆ ಪ್ರಶಸ್ತಿಗಳನ್ನು ವಿತರಿಸಿದರು.

ಪಟೇಲ್ ಅವರು ಇಂಡಿಯನ್ ರಾಯಲ್ ಅಕಾಡೆಮಿ ಆಫ್ ಆರ್ಟ್ ಅಂಡ್ ಕಲ್ಚರ್ ಸಂಸ್ಥೆಯ ಮೂಲಕ ದೃಶ್ಯಕಲೆಯ ಕ್ಷೇತ್ರದಲ್ಲಿ 30 ವರ್ಷಗಳಿಂದ ಸಲ್ಲಿಸಿರುವ ಸೇವೆಯನ್ನು ಮಾನ್ಯತೆ ನೀಡುವ ಹಿನ್ನೆಲೆಯಲ್ಲಿ ಈ ಪ್ರಶಸ್ತಿಗೆ ನೀಡಲಾಗಿದೆ.

21ನೇ ರಾಷ್ಟ್ರೀಯ ಸ್ಪರ್ಧೆ ಮತ್ತು ಪ್ರದರ್ಶನದಲ್ಲಿ ಭಾಗವಹಿಸಿದ ಅನೇಕ ಯುವ ಹಾಗೂ ವೃತ್ತಿಪರ ಕಲಾವಿದರಿಗೂ ವಿವಿಧ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುತ್ತದೆ. ಈ ಸಂದರ್ಭದಲ್ಲಿ ಶ್ರೀ ಧರ್ಷಿಣಿ ಕಲೈಕೂಡಂ ನಿರ್ದೇಶಕ ಡಿ. ಧರ್ಮಲಿಂಗಂ ಹಾಗೂ ಸಂಘದ ಸದಸ್ಯರು ಉಪಸ್ಥಿತರಿದ್ದರು.

# ಭೂಮಿಯನ್ನು ಉಳಿಸಿಕೊಳ್ಳಲು ರೈತರೆಲ್ಲರು ಸಂಘಟಿತರಾಗಬೇಕು

**ಸೈದಾಪುರ:ಏ.7:**ಇಂದಿನ ಸರ್ಕಾರಗಳು ಬಂಡವಾಳ ಶಾಹಿಗಳಗಳ ಪರವಾಗಿದ್ದು ರೈತರ ಭೂಮಿಯನ್ನು ಕೊಳ್ಳೆ ಹೊಡೆಯಲು ಸಿದ್ಧರಾಗಿದ್ದಾರೆ. ಆದ್ದರಿಂದ ಅನ್ನ ನೀಡುವ ನಮ್ಮ ಭೂಮಿಯನ್ನು ಉಳಿಸಿಕೊಳ್ಳಲು ರೈತರೆಲ್ಲರು ಸಂಘಟಿತರಾಗಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಹಸಿರು ಸೇನೆ ರಾಜ್ಯಾಧ್ಯಕ್ಷ ಮಾಧವರೆಡ್ಡಿ ಅಭಿಪ್ರಾಯಪಟ್ಟರು.

ಸಮೀಪದ ಕಡೇಚೂರು–ಬಾಡಿಯಾಳ ಕೈಗಾರಿಕ ಪ್ರದೇಶದಿಂದ ರೈತರು, ಜನಸಾಮಾನ್ಯರಿಗೆ ಉಂಟಾಗುತ್ತಿರುವ ತೊಂದರೆಗಳ ಕುರಿತು ಈ ಹಿಂದೆ ಜನಸಂಗ್ರಾಮ ಪರಿಷತ್ತು ಮತ್ತು ರಾಜ್ಯ ರೈತ ಸಂಘವು ಸರಕಾರಕ್ಕೆ ದೂರು ನೀಡಿತ್ತು. ಅದನ್ನು ಪರಿಶೀಲನೆ ಮಾಡಿ ಶೆಟ್ಟಿಹಳ್ಳಿ ಗ್ರಾಮದಲ್ಲಿ ರೈತರನ್ನು ಉದ್ದೇಶಿಸಿ ಮಾತನಾಡಿದರು. ಆಧುನಿಕವಾಗಿ ಜಗತ್ತು ಎಷ್ಟೇ ಮುಂದುವರೆದರೂ ಕೂಡ ಹೊಟ್ಟೆಗೆ ಅನ್ನ ನೀಡುವುದು ಮಾತ್ರ ಭೂಮಿ. ಸರ್ಕಾರ ರೈತರಿಂದ ಭೂಮಿಯನ್ನು ತೆಗೆದುಕೊಳ್ಳುವಾಗ ಅನೇಕ ಸುಳ್ಳು ಭರವಸೆಗಳನ್ನು, ಆಸೆ ಆಮಿಸೆಗಳನ್ನು ತೋರಿಸುತ್ತದೆ. ಆದರೆ ಅವುಗಳು ಎಂದಿಗೂ ಕೂಡ ಸಾಕಾರಗೊಳಿಸುವುದಿಲ್ಲ. ಕೊಟ್ಟ ಮಾತಿನಂತೆ ಯಾವುದೇ ಸರ್ಕಾರಗಳು ನಡೆದುಕೊಳ್ಳುವುದಿಲ್ಲ. ಆದ್ದರಿಂದ ಮುಗ್ಧ ರೈತರು ಹಣಕ್ಕಾಗಿ ನಿಮ್ಮ ಭೂಮಿಯನ್ನು ಮಾರಾಟ ಮಾಡಲು ಮುಂದಾಗಬೇಡಿ. ಇದರಿಂದ ಕಷ್ಟ–ನಷ್ಟ ಅನುಭವಿಸುವವರು ನಾವೇ ಹೊರೆತು ಸರ್ಕಾರಗಳಲ್ಲ ಎಂಬುದು



ನಾವು ಮೊದಲು ಅರಿತುಕೊಳ್ಳಬೇಕು ಎಂದರು.ಹಿರಿಯ ನ್ಯಾಯವಾದಿ ಚಾಗನೂರ್ ಮಲ್ಲಿಕಾರ್ಜುನರೆಡ್ಡಿ ಮಾತನಾಡಿ, ಸರ್ಕಾರ ಈ ಭಾಗದ ರೈತರಿಂದ ಭೂಮಿಯನ್ನು ಪಡೆದುಕೊಂಡು ಕೆಮಿಕಲ್ ಕಂಪನಿಗಳ ಸ್ಥಾಪನೆಗೆ ಅವಕಾಶ ನೀಡಿ ಇಲ್ಲಿನ ಪರಿಸರದ ಜೊತೆ ಜಲಜೀವನದೊಂದಿಗೆ ಚೆಲ್ಲಾಟವಾಡುತ್ತಿದೆ. ಆದ್ದರಿಂದ ನ್ಯಾಯಕ್ಕಾಗಿ ಹೋರಾಡುತ್ತಿರುವ ನಿಮ್ಮೊಂದಿಗೆ ನಾನು ಸದಾ ಇರುತ್ತೇನೆ ಎಂದು ಭರವಸೆ ನೀಡಿದರು.ವಿರೇಶ ಸಜ್ಜನ್, ಕಾಶಿನಾಥ ಮಡಿವಾಳ್, ಯಂಕಪ್ಪ ಮಂತ್ರಿ, ಮಹಾದೇವಪ್ಪ ಹೊನ್ನಕೇರಾ, ಮಲ್ಲಿಕಾರ್ಜುನ ತೆಗ್ಗಿನಮನೆ, ಭೀಮಶಪ್ಪ ಗುಡ್ಲೆ, ಬಸಪ್ಪ ಮಡಿವಾಳ್, ಭೀಮಪ್ಪ ಪಾಪನೋರ್, ಮಾಳಪ್ಪ ದದ್ದಲ್, ಅಂಜನೇಯ ಹೊಸಮನಿ, ಮಹೇಶ, ಚಾಂದ್ ಬಾಡಿಯಾಳ್, ಪ್ರಕಾಶ ಗೂಡುರು, ಸೇರಿದಂತೆ ಇತರರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE